ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೫

## ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

**ಸೋಮವಾರ, ದಿನಾಂಕ : ೨೧ನೇ ಸೆಪ್ಟೆಂಬರ್, ೨೦೨೦**

---

**ಸಮೂಹ – I**

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೪. ವೈದ್ಯಕೀಯ ಶಿಕ್ಷಣ ಸಚಿವರು.

೫. ಅರಣ್ಯ ಸಚಿವರು.

೬. ಕಾರ್ಮಿಕ ಮತ್ತು ಸಕ್ಕರೆ ಸಚಿವರು.

---

## ಬೀದರ್ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯ ಮೂಲ ಸೌಕರ್ಯದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧ (೪೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದಲ್ಲಿ ನೂರು ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಿ ಹಲವು ವರ್ಷಗಳಾದರೂ ಅದಕ್ಕೆ ಮೂಲಸೌಕರ್ಯ ಒದಗಿಸದೇ ಇರುವುದಕ್ಕೆ ಕಾರಣವೇನು ; ಈ ಆಸ್ಪತ್ರೆ ಇಲ್ಲಿಯವರೆಗೆ ಉದ್ಘಾಟನೆಯಾಗದಿರಲು ಕಾರಣವೇನು ;

(ಆ) ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳು ಇಲ್ಲಿಯವರೆಗೆ ನೇಮಕಗೊಂಡಿರುವುದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ವೈದ್ಯರು ಮತ್ತು ಸಿಬ್ಬಂದಿಗಳ ನೇಮಕಾತಿ ಮಾಡಿ ಸಾರ್ವಜನಿಕರ ಉಪಯೋಗಕ್ಕೆ ಒದಗಿಸುವುದು ಯಾವಾಗ ?

## ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ (ಹಳ್ಳಿಖೇಡ ಬಿ) ಕಾರ್ಖಾನೆಯ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨ (೪೭) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಕಳೆದ ಎರಡು ಹಂಗಾಮಿನಿಂದ ಪ್ರಾರಂಭ ಮಾಡದೆ ಬಂದ್ ಮಾಡಲಾಗಿದ್ದು, ಅಲ್ಲಿ ಕಾರ್ಯ

ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಎರಡು ವರ್ಷದಿಂದ ಸಂಬಳ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರಿಗೆ ಪರಿಹಾರ ನೀಡುವ ಯೋಚನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವಾಗ ಪರಿಹಾರ ನೀಡಲಾಗುವುದು ;

(ಆ) ಈ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಪರ್ಯಾಯ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಹಮ್ಮಿಕೊಂಡಿರುವ ಯೋಜನೆಗಳಾವುವು ;

(ಇ) ಸದರಿ ಕಾರ್ಖಾನೆಯನ್ನು ಪುನಶ್ಚೇತನ ಮಾಡುವ ಯೋಜನೆ ಸರ್ಕಾರಕ್ಕಿದೆಯೇ ; ಇದ್ದರೆ ಯಾವಾಗ ಪ್ರಾರಂಭಿಸಲಾಗುವುದು ; ಇಲ್ಲದಿದ್ದರೆ ಅದಕ್ಕೆ ಕಾರಣವೇನು ;

(ಈ) ಈ ಜಿಲ್ಲೆಯಲ್ಲಿ ಅನೇಕ ಕಾರ್ಮಿಕರಿದ್ದು ಅವರಿಗಾಗಿ ಒಂದು ಆಸ್ಪತ್ರೆ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದರೆ ಆರಂಭಿಸಲಾಗುವುದು ಯಾವಾಗ ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣವೇನು ? (ವಿವರ ನೀಡುವುದು)

## ಬೀದರ್ ಬ್ರೀಮ್ಸ್ ಕಾಲೇಜಿನ ಅವ್ಯವಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩ (೪೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ಬ್ರೀಮ್ಸ್ ಕಾಲೇಜಿನಲ್ಲಿ ನಡೆದಿದೆ ಎನ್ನಲಾದ ರೂ.೧೮.೦೦ ಕೋಟಿ ರೂಪಾಯಿಯ ಅವ್ಯವಹಾರದ ತನಿಖೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಬ್ರೀಮ್ಸ್‌ನಲ್ಲಿ ನಡೆದ ಅವ್ಯವಹಾರಕ್ಕೆ ಕಾರಣರಾದವರು ಎನ್ನಲಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನಿಯೋಜನೆ ಮೇಲೆ ಬಂದಿರುವ ಗುಮಾಸ್ತರನ್ನು ಅದೇ ಸ್ಥಳದಲ್ಲಿ ಮುಂದುವರೆಸಿರುವುದರ ಬಗ್ಗೆ ಸರ್ಕಾರದ ಉದ್ದೇಶವೇನು ; ಅವರನ್ನು ಮೂಲ ಇಲಾಖೆಗೆ ಕಳುಹಿಸದೇ ಇರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಕಳೆದ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಸರ್ಕಾರ ಭರವಸೆ ನೀಡಿದ್ದು, ಇಲ್ಲಿಯವರೆಗೆ ತನಿಖೆ ಆರಂಭಿಸದೇ ಇರುವುದಕ್ಕೆ ಕಾರಣವೇನು ; ಇದರಲ್ಲಿ ಸರ್ಕಾರದ ಪಾತ್ರವಿದೆಯೇ ?

## ಬೀದರ್ ಜಿಲ್ಲೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪ (೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ರಲ್ಲಿ ಬೀದರ್ ನಗರಕ್ಕೆ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿದ್ದು, ಅದರ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿ ಯಾವ ಹಂತದಲ್ಲಿದೆ ; ಅದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ; ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ಸದರಿ ಕಾಲೇಜು ಬರುವ ಶೈಕ್ಷಣಿಕ ಸಾಲಿನಲ್ಲಿ ಆರಂಭಗೊಳ್ಳುವುದೇ ; ಆರಂಭಗೊಳ್ಳುವುದಾದರೆ, ಅದಕ್ಕೇನಾದರೂ ಕಾಲಮಿತಿ ಹಾಕಿಕೊಳ್ಳಲಾಗಿದೆಯೇ ;

(ಇ) ಬರುವ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಆರಂಭವಾಗದಿದ್ದಲ್ಲಿ, ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ?

## ಕೋವಿಡ್–೧೯ ರೋಗವನ್ನು ನಿಯಂತ್ರಣಗೊಳಿಸುವ ಮತ್ತು ಟೆಸ್ಟಿಂಗ್ ವರದಿ ವಿಳಂಬತೆ ತಡೆಹಿಡಿಯಲು ಕೈಗೊಂಡ ಕ್ರಮಗಳ ಕುರಿತು

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೫ (೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ರೋಗವನ್ನು ನಿಯಂತ್ರಣಗೊಳಿಸಲು ಸರ್ಕಾರ ಯಾವ ರೀತಿಯ ಕ್ರಮ ಅನುಸರಿಸಿದೆ ;

(ಆ) ಕೋವಿಡ್–೧೯ ರೋಗಕ್ಕೆ ಟೆಸ್ಟ್ ಮಾಡಿದ ರೋಗಿಯ ರಿಪೋರ್ಟ್ ನಿರೀಕ್ಷೆ ಮಾಡುವುದಕ್ಕೆ ಗರಿಷ್ಠ ೧೦–೧೨ ದಿನ ಆಗುತ್ತಿರುವುದು ನಿಜವೇ ; ಈ ಅವಧಿಯಲ್ಲಿ ರೋಗಿಯು ಸೆಲ್ಫ್ ಕ್ವಾರಂಟೇನ್ ಆಗದೆ ಸುತ್ತಾಡುವುದನ್ನು ತಡೆಹಿಡಿಯುವುದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ; ಈ ರೋಗಕ್ಕೆ ಇಲ್ಲಿಯವರೆಗೆ ಐಟಂವಾರು ಖರ್ಚಾದ ವಿವರಗಳೇನು ?

## ಏಜೆನ್ಸಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ನೀಡದಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬ (೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಹೊರ ಸಂಪನ್ಮೂಲ ಏಜೆನ್ಸಿಯವರಿಗೆ ಟೆಂಡರ್ ನಿಬಂಧನೆಗಳಿಗೊಳಪಟ್ಟು ಕಾರ್ಯಾದೇಶವನ್ನು ನೀಡಿರುವುದು ನಿಜವಲ್ಲವೇ ;

(ಆ) ಕಾರ್ಯಾದೇಶದಲ್ಲಿನ ಷರತ್ತಿನನ್ವಯ ಮುಂಗಡವಾಗಿ ಕನಿಷ್ಠ ೨ ಮಾಹೆಗಳಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಸಂದಾಯವಾಗಬೇಕಾದ ವೇತನವನ್ನು ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ಇ.ಸಿ.ಎಸ್. ಅಥವಾ ಆರ್.ಟಿ.ಜಿ.ಎಸ್. ಮೂಲಕ ಪ್ರತಿ ತಿಂಗಳು ೫ನೇ ದಿನಾಂಕದೊಳಗೆ ವೇತನ ಪಾವತಿಸಬೇಕಾಗಿರುವುದು ನಿಜವಲ್ಲವೇ ;

(ಇ) ಸರ್ಕಾರದಿಂದ ನಿಗದಿತ ಅನುದಾನ ಬಿಡುಗಡೆ ಯಾಗದಿರುವುದರಿಂದ ೬ ತಿಂಗಳಾದರೂ ಸದರಿ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಸದರಿ ಏಜೆನ್ಸಿಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಜೀವನ ನಿರ್ವಹಣೆಗೆ ತುಂಬಾ

ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸಿಬ್ಬಂದಿಗೆ ಕೂಡಲೇ ವೇತನವನ್ನು ಪಾವತಿಸುವ ಸಂಬಂಧ ಸರ್ಕಾರ ಹಣ ಬಿಡುಗಡೆಗೊಳಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಮೂಲಭೂತ ಸೌಕರ್ಯಗಳ ಹಾಗೂ ಉಪನ್ಯಾಸಕರುಗಳ ಕೊರತೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭ (೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜು ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಹಾಗೂ ಉಪನ್ಯಾಸಕರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಈ ವರ್ಷದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಗಣನೀಯವಾಗಿ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಕೋವಿಡ್-೧೯ ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕರ ಸಂಕಷ್ಟಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೮ (೩೭) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಕಾರ್ಮಿಕರು ಬೆಂಗಳೂರಿಗೆ ಬಂದು ನೆಲೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮಹಿಳೆಯರು ಮತ್ತು ಪುರುಷ ಕಾರ್ಮಿಕರೆಷ್ಟು ; (ವಿವರ ನೀಡುವುದು)

(ಆ) ಕೋವಿಡ್-೧೯ ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕರು ತೀವ್ರ ಸಂಕಷ್ಟಕ್ಕೆ ಒಳಗಾಗಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಬಡ ಕಾರ್ಮಿಕರ ಕುಟುಂಬಗಳಿಗೆ ನೆರವು ನೀಡಲು ಸರ್ಕಾರ ಹಾಕಿಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಸರ್ಕಾರವು ವಲಸೆ ಕಾರ್ಮಿಕರಿಗೆ ನೆರವಾಗಲು ಕೈಗೊಂಡಿರುವ ಯೋಜನೆಗಳನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ;

(ಉ) ಕಾರ್ಮಿಕರ ಸಂಕಷ್ಟ ನಿವಾರಿಸುವಲ್ಲಿ ಕಾರ್ಮಿಕರ ಕಲ್ಯಾಣನಿಧಿಯ ಪಾತ್ರವೇನು ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರುಗಳಿಗೆ ವೇತನ ನೀಡದಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೯ (೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು

ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರುಗಳಿಗೆ ಬಹಳ ಸಮಯದಿಂದ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿದ್ಯುಚ್ಛಕ್ತಿ, ದೂರವಾಣಿ, ವಾಹನ, ಸೆಕ್ಯೂರಿಟಿಗೆ ಸಂಬಂಧಪಟ್ಟ ಅನುದಾನವನ್ನು ಬಹಳ ಸಮಯದಿಂದ ಬಿಡುಗಡೆ ಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರಿ ಪದವಿ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳೆಷ್ಟು ; ಅವುಗಳನ್ನು ಯಾವಾಗ ಭರ್ತಿಮಾಡಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು (NEP) ಅಳವಡಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦ (೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಹೊಸ ಶಿಕ್ಷಣ ನೀತಿಯನ್ನು (NEP) ಯಾವಾಗ ಅಳವಡಿಸಿಕೊಳ್ಳಲಾಗುವುದು ; ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು ;

(ಆ) ಈ ಹೊಸ ಶಿಕ್ಷಣ ನೀತಿಯಿಂದಾಗಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ಪಠ್ಯಕ್ರಮಗಳಲ್ಲಿ ಬದಲಾವಣೆಯಾಗುವುದೇ ; ಹಾಗಿದ್ದಲ್ಲಿ, ವಿದ್ಯಾರ್ಥಿಗಳಿಗೆ ಹೊಸ ಪಠ್ಯಕ್ರಮಗಳ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಹೊಸ ಶಿಕ್ಷಣ ನೀತಿಯ ಪಠ್ಯಕ್ರಮ ಅನುಸರಿಸಲು ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರಿಗೆ ತರಬೇತಿ ನೀಡಲಾಗುವುದೇ ; (ವಿವರ ನೀಡುವುದು)

(ಈ) ಕೋವಿಡ್–೧೯ ಪೆಂಡಮಿಕ್‌ನಿಂದಾಗಿ ಖಾಸಗಿ ಶಾಲೆಗಳು ಅಧಿಕ ಶುಲ್ಕವನ್ನು ಭರಿಸುವಂತೆ ಪೋಷಕರ ಮತ್ತು ವಿದ್ಯಾರ್ಥಿಗಳ ಮೇಲೆ ಒತ್ತಡ ಹೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಸರ್ಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರುಗಳು ೨೦ ವರ್ಷ ಸೇವೆ ಸಲ್ಲಿಸಿದ್ದರೂ ಸಹ ಮುಂಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮುಂಬಡ್ತಿ ನೀಡಲಾಗುವುದೇ ?

## ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಕೊರೊನಾ ರಜಾ ಅವಧಿಯನ್ನು ಸೇವಾವದಿ ಎಂದು ಪರಿಗಣಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೧ (೧೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊರೋನ ಲಾಕ್‌ಡೌನ್‌ನಿಂದ ಅನುದಾನ ರಹಿತ ಶಾಲೆಗಳ ೨ ಲಕ್ಷಕ್ಕೂ ಹೆಚ್ಚು ಶಿಕ್ಷಕರು ಕೆಲಸ ಮತ್ತು ವೇತನವಿಲ್ಲದೆ ಕಳೆದ ಆರು ತಿಂಗಳಿಂದ ಸಂಕಷ್ಟಕ್ಕೆ ಸಿಲುಕಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕೊರೋನ ಲಾಕ್‌ಡೌನ್ ಅವಧಿಯನ್ನು ಸೇವೆ ಎಂದು ಪರಿಗಣಿಸಿ ಅತಿಥಿ ಉಪನ್ಯಾಸಕರು ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ವಿಶೇಷ ಪ್ಯಾಕೇಜ್ ಮೂಲಕ ಧನ ಸಹಾಯ ನೀಡಲು ಸರಕಾರಕ್ಕೆ ಇರುವ ತೊಂದರೆಗಳೇನು ;

(ಇ) ಈಗಲಾದರೂ ಸರ್ಕಾರ ಅನುದಾನ ರಹಿತ ಶಾಲೆಗಳ ನೌಕರರ ಮನವಿಯನ್ನು ಪರಿಗಣಿಸಿ ವಿಶೇಷ ಪ್ಯಾಕೇಜ್ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೨ (೧೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉನ್ನತ ಶಿಕ್ಷಣ ಇಲಾಖೆಯ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; ಇವರುಗಳು ಯಾವ ವರ್ಷದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿಯವರಿಗೆ ಹಾಲಿ ನೀಡುತ್ತಿರುವ ಗೌರವ ಧನ ಎಷ್ಟು ; ಈ ಗೌರವ ಧನವನ್ನು ಹೆಚ್ಚಿಸಲು ಸರ್ಕಾರ ಚಿಂತನೆ ನಡೆಸಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸಲು ಸರ್ಕಾರವು ಇಲ್ಲಿಯವರೆಗೆ ಯಾವ ಕ್ರಮ ಕೈಗೊಂಡಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಯುಜಿಸಿ ನಿಯಮಗಳಿಗೆ ಹೊಂದಿಕೊಂಡಂತೆ ವಿಶೇಷ ನಿಯಮಗಳನ್ನು ರಚಿಸಿ, ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆಯನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅತಿಥಿ ಉಪನ್ಯಾಸಕರಿಗೆ ಸುಮಾರು ೮ ತಿಂಗಳಿಂದ ಗೌರವ ಧನ ಪಾವತಿ ಆಗದಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಇವರಿಗೆ ಗೌರವ ಧನ ಪಾವತಿಸಲಾಗುವುದು ?

## ಸರಕಾರಿ ಐ.ಟಿ.ಐ ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩ (೧೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಕೆಲಸ

ನಿರ್ವಹಿಸುತ್ತಿದ್ದಾರೆ ; (ಅವರ ಹೆಸರು ಮತ್ತು ಕೆಲಸ ನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು ಹಾಗೂ ಅವರು ಅತಿಥಿ ಉಪನ್ಯಾಸಕರಾಗಿ ಯಾವ ದಿನಾಂಕದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಎಂಬ ಬಗ್ಗೆ ಸಂಸ್ಥೆವಾರು, ತಾಲ್ಲೂಕುವಾರು, ಮತ್ತು ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೧೫–೨೦ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಇವರನ್ನು ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಇಷ್ಟು ವರ್ಷ ಕೆಲಸ ಮಾಡಿ ಅನುಭವ ಹೊಂದಿದ ಇವರ ಅನುಭವವನ್ನು ಪರಿಗಣಿಸಿ ಸರ್ಕಾರ ತಕ್ಷಣ ಇವರನ್ನು ಖಾಯಂ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ?

## E.W.S. Certificate ನ್ನು ಪಡೆಯುವ ಮಾನದಂಡಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೪ (೧೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ E.W.S. (Economically Weaker Section Certificate) ನ್ನು ಪಡೆಯಲು ಇರುವ ಮಾನದಂಡಗಳೇನು ; ಇದರ ಸಂಬಂಧ ರಾಜ್ಯ ಸರ್ಕಾರ ಹೊರಡಿಸಿರುವ ಆದೇಶದ ಪ್ರತಿ ನೀಡುವುದು ;

(ಆ) ರಾಜ್ಯದಲ್ಲಿ ಈ ಪ್ರಮಾಣ ಪತ್ರ ಪಡೆಯಲು ಅರ್ಹರಿರುವ ಜಾತಿಗಳು ಯಾವುವು ; ಇದರ ಸಂಬಂಧ ಕೇಂದ್ರ ಸರ್ಕಾರ ಹೊರಡಿಸಿರುವ ಮಾರ್ಗಸೂಚಿ ಹಾಗೂ ಇತರೆ ಆದೇಶದ ಪ್ರತಿಗಳನ್ನು ನೀಡುವುದು ;

(ಇ) ರಾಜ್ಯದಲ್ಲಿ ಈ ಪ್ರಮಾಣ ಪತ್ರ ಪಡೆಯಲು ಸರ್ಕಾರವು ನಿಗದಿಪಡಿಸಿರುವ ಉಪ ಜಾತಿಗಳನ್ನು ದೃಢೀಕರಿಸುವ ದಾಖಲೆಗಳು ಯಾವುವು ;

(ಈ) ಸದರಿ ಅಭ್ಯರ್ಥಿಯ ಟಿ.ಸಿ. ಅಥವಾ ಜನನ ಪ್ರಮಾಣ ಪತ್ರದಲ್ಲಿ ಭಾರತೀಯ ಹಿಂದು ಒಕ್ಕಲಿಗ ಎಂದು ನಮೂದಾಗಿದ್ದು ಉಪ ಜಾತಿಗಳನ್ನು ನಮೂದಿಸಿರುವುದಿಲ್ಲ ; ಹಾಗಾದರೆ ಉಪ ಜಾತಿಗಳನ್ನು ರುಜುವಾತು ಮಾಡಿ E.W.S. (Economically Weaker Section Certificate) ನ್ನು ಪಡೆಯಲು ಯಾವ ದಾಖಲೆಗಳನ್ನು ನೀಡಬೇಕಾಗುತ್ತದೆ ; ವಿವರವಾದ ಮಾಹಿತಿಗಳನ್ನು ನೀಡುವುದು ?

## ಶಾಲಾ ಕೊಠಡಿಗಳು ಶಿಥಿಲಗೊಂಡಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫ (೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಶಾಲಾ ಕೊಠಡಿಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಿಥಿಲಗೊಂಡಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೊಠಡಿಗಳನ್ನು ದುರಸ್ಥಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಇಲ್ಲಿಯವರೆಗೆ ಹೊಸದಾಗಿ ಎಷ್ಟು ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ ? (ಜಿಲ್ಲಾವಾರು, ತಾಲ್ಲೂಕುವಾರು ವಿವರ ಒದಗಿಸುವುದು)

## ಆನ್‌ಲೈನ್ ಶಿಕ್ಷಣ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೧೬ (೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆನ್‌ಲೈನ್ ಶಿಕ್ಷಣ ವ್ಯವಸ್ಥೆಯು ಕೋವಿಡ್ ಮಾರಿಯಿಂದ ಮಕ್ಕಳಿಗೆ ಅನಿವಾರ್ಯವಾಗಿರುವ ಹಿನ್ನೆಲೆಯಲ್ಲಿ ಆನ್‌ಲೈನ್ ಶಿಕ್ಷಣದಲ್ಲಿ ವೈಜ್ಞಾನಿಕ ಮಾಪನ ವ್ಯವಸ್ಥೆಯನ್ನು ಸರ್ಕಾರ ಯಾವ ರೀತಿ ಮಾಡಿದೆ ಅಥವಾ ಮಾಡುತ್ತದೆ ;

(ಆ) ಆನ್‌ಲೈನ್ ಶಿಕ್ಷಣ ಬೋಧನೆಯನ್ನು ವೈಜ್ಞಾನಿಕವಾಗಿ ನೀಡಲು ಶಿಕ್ಷಕ/ಶಿಕ್ಷಕಿಯರಿಗೆ ತರಬೇತಿ ನೀಡುವ ವ್ಯವಸ್ಥೆಯನ್ನು ಸೃಜಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಸಾಮೂಹಿಕ ಆನ್‌ಲೈನ್ ಶಿಕ್ಷಣ ವ್ಯವಸ್ಥೆಯನ್ನು ಇಂಟರ್ ಆಕ್ಟೀವ್ (Inter Active) ಮಾಡಲು ಇರುವ ತಾಂತ್ರಿಕ ತೊಡಕು ಅಥವಾ ಸವಾಲುಗಳನ್ನು ಎದುರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಪ್ಯಾಕಿಂಗ್‌ಗಾಗಿ ವಸ್ತುಗಳ ಅನಗತ್ಯ ಬಳಕೆ ವಸ್ತುಗಳ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೧೭ (೧೪೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಮೇಜಾನ್ ಮತ್ತು ಇತರ ಕಂಪನಿಗಳು ಒದಗಿಸುತ್ತಿರುವ e-Marketing ವ್ಯವಸ್ಥೆಯಿಂದ ಅಗತ್ಯಕ್ಕಿಂತ ವಿಪರೀತವಾಗಿ

ಪ್ಯಾಕೇಜಿಂಗ್ ವಸ್ತುಗಳು ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನಗತ್ಯ ಪ್ಯಾಕೇಜಿಂಗ್ ವಸ್ತುಗಳ ಬಳಕೆಯನ್ನು ನಿಯಂತ್ರಿಸಲು ಸರ್ಕಾರದ ಕ್ರಮಗಳೇನು ?

## ರಾಷ್ಟ್ರೀಯ ಶಿಕ್ಷಣ ನೀತಿಯ ಪರಿಣಾಮದ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮ (೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಶಿಕ್ಷಣ ನೀತಿಯನ್ನು ನಮ್ಮ ರಾಜ್ಯದಲ್ಲಿ ಯಾವಾಗಿನಿಂದ ಜಾರಿಗೆ ತರಲಾಗಿದೆ ;

(ಆ) ಇದನ್ನು ಜಾರಿ ಮಾಡುವುದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ಮಕ್ಕಳಿಗೆ ಅನ್ಯಾಯವಾಗುವುದಿಲ್ಲವೆ ;

(ಇ) ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳಾವುವು ?

## ಖಾಸಗಿ ಶಾಲೆಗಳಿಂದ ಶೋಷಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯ (೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಶಾಲೆಗಳವರು ಮಕ್ಕಳನ್ನು ಶಾಲೆಗೆ ಸೇರಿಸಿಕೊಳ್ಳುವಾಗ ಡೋನೇಷನ್ ಪಡೆಯುವುದರ ಜೊತೆಗೆ ಬೇರೆ ಬೇರೆ ಹೆಸರಿನಲ್ಲಿ

ಹೆಚ್ಚಿನ ಶಿಕ್ಷಣ ಶುಲ್ಕವನ್ನು ಪೋಷಕರಿಂದ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರ ಸುತ್ತೋಲೆ ಹೊರಡಿಸಿ ಇಂತಿಷ್ಟೇ ಹಣವನ್ನು ಪೋಷಕರಿಂದ ಪಡೆಯುವ ಬಗ್ಗೆ ನಿಗದಿಗೊಳಿಸಿದೆಯೇ ;

(ಇ) ಖಾಸಗಿ ಶಾಲೆಗಳ ಶೋಷಣೆಯನ್ನು ತಪ್ಪಿಸಲು ಸರ್ಕಾರ ಜನಪರ ಕ್ರಮಗಳನ್ನು ಯಾವ ರೀತಿ ಕೈಗೊಳ್ಳುತ್ತದೆ ?

## ನಿರುದ್ಯೋಗಿ ವೈದ್ಯರುಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦ (೮೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಮುಗಿಸಿ ಉದ್ಯೋಗಕ್ಕಾಗಿ ಕಾಯುತ್ತಿರುವವರ ಸಂಖ್ಯೆ ಎಷ್ಟು ; ಲಕ್ಷಾಂತರ ರೂಪಾಯಿ ಸಾಲ ಮಾಡಿ ಶಿಕ್ಷಣ ಪಡೆದ ಯುವಕ ಯುವತಿಯರು ನಿರುದ್ಯೋಗಿಗಳಾಗಿದ್ದು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಉದ್ಯೋಗಗಳನ್ನು ಸೃಷ್ಟಿಸಿ ಇವರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಆ) ವೈದ್ಯರ ಕೊರತೆಯಿರುವ ಈ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹೊಸದಾಗಿ ವೈದ್ಯರುಗಳನ್ನು ಎಷ್ಟು ದಿವಸಗಳಲ್ಲಿ ನೇಮಕಾತಿ ಮಾಡಲಾಗುವುದು ;

(ಇ) ವಿಶೇಷ ನೇಮಕಾತಿಗಳನ್ನು ಮಾಡಲು ಯಾವುದಾದರೂ ಕಾರ್ಯಕ್ರಮ ಕೈಗೊಳ್ಳಲಾಗುವುದೇ ?

## ಅರಣ್ಯ ಸಂರಕ್ಷಣೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೧ (೧೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ಅರಣ್ಯ ಪ್ರದೇಶವನ್ನು ಸಂರಕ್ಷಿಸಲು ಸರ್ಕಾರದ ಮುಂದಿರುವ ಯೋಜನೆಗಳು ಯಾವುವು ?

## ಕಾರ್ಮಿಕರ ವೇತನ ಮತ್ತು ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೨ (೧೫೮) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೂಲಿ ಕಾರ್ಮಿಕರಿಗೆ ಸರ್ಕಾರ ಯಾವ ರೀತಿಯ ಆರ್ಥಿಕ ಸವಲತ್ತುಗಳನ್ನು ನೀಡುತ್ತಿದೆ ;

(ಆ) ಕೂಲಿ ಕಾರ್ಮಿಕರ ಶ್ರೇಯೋಭಿವೃದ್ಧಿಗೆ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ?

## ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೩ (೧೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮಧ್ಯಾಹ್ನದ ಬಿಸಿಯೂಟ ಕಾರ್ಯಕ್ರಮದಡಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಸಂಬಳ ನೀಡದಿರುವ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪ (೧೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಧ್ಯಾಹ್ನದ ಬಿಸಿಯೂಟ (Midday Meal) ಕಾರ್ಯಕ್ರಮದಡಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಕಳೆದ ಏಪ್ರಿಲ್ ತಿಂಗಳಿನಿಂದ ಸಂಬಳ ನೀಡದಿರುವುದು ನಿಜವೇ ;

(ಆ) ಈ ಅರೆಕಾಲಿಕ ನೌಕರರ ಸಂಬಳ ತಿಂಗಳಿಗೆ ರೂ. ೨,೬೦೦/– ರಿಂದ ರೂ. ೨,೭೦೦ ಆಗಿದ್ದು, ಕೋವಿಡ್–೧೯ರ ಐಸೋಲೇಷನ್ ಕೇಂದ್ರಗಳಲ್ಲಿ ಕೆಲಸ ನಿರ್ವಹಿಸಿದ್ದು, ವಿದ್ಯಾರ್ಥಿಗಳಿಗೆ ಆಹಾರ ಪದಾರ್ಥಗಳ ಕಿಟ್‌ಗಳನ್ನು ಹಂಚಿಕೆ ಮಾಡಿದ್ದರೂ ಇವರುಗಳಿಗೆ ಮಿಡ್ ಡೇ ಸಂಬಳವನ್ನಾಗಲೀ ಅಥವಾ ಲಾಕ್‌ಡೌನ್ ಸಂಬಂಧದ ಪರಿಹಾರವನ್ನಾಗಲೀ ನೀಡಿಲ್ಲದಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಇವರುಗಳನ್ನು ಪೂರ್ಣಕಾಲಿಕ ನೌಕರರೆಂದು ಪರಿಗಣಿಸಿ, ಕನಿಷ್ಠ ಸಂಬಳ, ಸೇವಾ ಭದ್ರತೆ, ಆರೋಗ್ಯ ಭತ್ಯೆ ಹಾಗೂ ಪಿಂಚಣಿ ಸೌಲಭ್ಯ ದೊರಕಿಸಿಕೊಡುವುದು ಮುಖ್ಯವಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫ (೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್) ಯೋಜನೆಯಡಿ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್) ಯೋಜನೆಯಡಿ ಸ್ಥಗಿತಗೊಂಡಿರುವ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು ; ಹಾಗೂ ಈ ಕಾಮಗಾರಿಗಳನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ವನ್ಯಜೀವಿಗಳು ಕಡಿಮೆಯಾಗುತ್ತಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬ (೭೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಳಿವಿನ ಅಂಚಿನಲ್ಲಿರುವ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ವನ್ಯಜೀವಿಗಳ ಸಂರಕ್ಷಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ; (ಯೋಜನಾವಾರು, ವಿಭಾಗವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲಾ ವ್ಯಾಪ್ತಿಯ ವಿವಿಧ ಉಪ ವಿಭಾಗಗಳಿಗೆ ವನ್ಯಜೀವಿಗಳ ಸಂರಕ್ಷಣೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ಬಳಸಲಾಗಿದೆ ? (ಉಪ ವಿಭಾಗಾವಾರು ವಿವರ ನೀಡುವುದು)

## ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳನ್ನು ತೆರೆಯುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭ (೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ, ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಆಧಾರಿತ ಎಷ್ಟು ಸಂಸ್ಥೆಗಳಿವೆ ; (ವಿವರ ನೀಡುವುದು) ಈ ಸಂಸ್ಥೆಗಳಲ್ಲಿ ಸರೋಜಿನಿ ಮಹಿಷಿ ವರದಿಯಂತೆ ಸ್ಥಳೀಯರಿಗೆ ಉದ್ಯೋಗಾವಕಾಶಗಳನ್ನು ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರವು ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪನೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; ಉದ್ದೇಶಿಸಿದ್ದಲ್ಲಿ ; ಯಾವ ಯಾವ ಪ್ರದೇಶಗಳಲ್ಲಿ ಈ ಕೇಂದ್ರಗಳನ್ನು ತೆರೆಯಲಾಗುವುದು ; (ವಿವರ ನೀಡುವುದು)

(ಇ) ಬೆಂಗಳೂರು ನಗರ ಹೊರತುಪಡಿಸಿ ರಾಜ್ಯದ ಇತರೆ ಭಾಗಗಳಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪನೆ ಮಾಡಲು ಖಾಸಗಿ ಕಂಪನಿಗಳಿಗೆ ಸರ್ಕಾರ ಒದಗಿಸುತ್ತಿರುವ ಸವಲತ್ತುಗಳೇನು ? (ವಿವರ ನೀಡುವುದು)

## ಹಾಸನ ಜಿಲ್ಲೆಯಲ್ಲಿ ಕೋವಿಡ್–೧೯ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮ (೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ದಿನಾಂಕ : ೩೧–೦೮–೨೦೨೦ರವರೆಗೆ ಎಷ್ಟು ಜನರಿಗೆ ಕೋವಿಡ್–೧೯ ಪರೀಕ್ಷೆ ಮಾಡಲಾಗಿದೆ ; ಇದರಲ್ಲಿ ಎಷ್ಟು ಪಾಸಿಟಿವ್ ಪ್ರಕರಣಗಳು ಕಂಡು ಬಂದಿವೆ ; ಎಷ್ಟು ಜನರಿಗೆ ಸರ್ಕಾರದಿಂದ ಚಿಕಿತ್ಸೆ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೋವಿಡ್–೧೯ ಆಸ್ಪತ್ರೆ, ಫಿವರ್ ಕ್ಲಿನಿಕ್ ಮತ್ತು ಕೋವಿಡ್–೧೯ ನಿರ್ವಹಣಾ

ಕೇಂದ್ರಗಳು ಯಾವುವು ; ಈ ಕೇಂದ್ರಗಳಲ್ಲಿರುವ ಚಿಕಿತ್ಸಾ ವ್ಯವಸ್ಥೆಗಳೇನು ಮತ್ತು ಎಷ್ಟು ಜನರಿಗೆ ಚಿಕಿತ್ಸೆ ನೀಡಬಹುದಾಗಿದೆ ; (ಕೇಂದ್ರವಾರು ವಿವರ ನೀಡುವುದು)

(ಇ) ಕೋವಿಡ್-೧೯ ನಿಯಂತ್ರಣಕ್ಕಾಗಿ ಹಾಸನ ಜಿಲ್ಲೆಗೆ ಯಾವ ಯಾವ ಉಪಕರಣಗಳನ್ನು ಮತ್ತು ಅವಶ್ಯ ಪರಿಕರಗಳನ್ನು ಖರೀದಿಸಲಾಗಿದೆ ಮತ್ತು ಇವುಗಳ ವೆಚ್ಚದ ವಿವರಗಳೇನು ; ಇವುಗಳನ್ನು ಯಾವ ಕೇಂದ್ರಗಳಲ್ಲಿ ಬಳಕೆ ಮಾಡಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕೋವಿಡ್-೧೯ ನಿಯಂತ್ರಣಕ್ಕಾಗಿ ದಿನಾಂಕ : ೩೧-೦೮-೨೦೨೦ ರವರೆಗೆ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾಗಿರುವ ಅನುದಾನವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಧಾರ್ಮಿಕ ಅಲ್ಪ ಸಂಖ್ಯಾತರ ಕೈಗಾರಿಕೆ ತರಬೇತಿ ಸಂಸ್ಥೆ (ಐಟಿಐ) ಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯ (೯೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ, ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ ಕಾಲೇಜು)ಗಳು ಧಾರ್ಮಿಕ ಅಲ್ಪ

ಸಂಖ್ಯಾತರ ಕಾಲೇಜುಗಳೆಂದು ಸ್ಥಾನಮಾನ ನೀಡುವಂತೆ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿದ್ದರೂ ಸಹ ಈ ಕಾಲೇಜುಗಳಿಗೆ ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಣೆ/ಮಾನ್ಯತೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಆದೇಶಗಳ ಸಹಿತ ವಿವರ ನೀಡುವುದು)

(ಆ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು) ಗಳಿಂದ ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಿಸಲು/ಮಾನ್ಯತೆ ನೀಡುವಂತೆ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿವೆಯೇ ; ಸ್ವೀಕೃತವಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಪ್ರಸ್ತಾವನೆಗಳು ಬಂದಿವೆ ; ಈ ಪ್ರಸ್ತಾವನೆಗಳು ಸ್ವೀಕೃತವಾದ ದಿನಾಂಕವೇನು ; ಸದರಿ ಪ್ರಸ್ತಾವನೆಗಳು ಯಾವ ಹಂತದಲ್ಲಿವೆ ; ಎಷ್ಟು ಪ್ರಸ್ತಾವನೆಗಳಿಗೆ ಧಾರ್ಮಿಕ ಅಲ್ಪ ಸಂಖ್ಯಾತರ ಸಂಸ್ಥೆ ಎಂದು ಘೋಷಿಸಲಾಗಿದೆ ; (ಕಾಲೇಜುವಾರು ವಿವರ ನೀಡುವುದು)

(ಇ) ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು) ಗಳನ್ನು ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಿಸಲು/ಸ್ಥಾನಮಾನ ನೀಡಲು ಬೇಕಾಗಿರುವ ಮಾರ್ಗಸೂಚಿಗಳನ್ನು/ಅಧಿಸೂಚನೆಗಳನ್ನು ಹೊರಡಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾಕೆ ಹೊರಡಿಸಿಲ್ಲ ; ಯಾವ ಕಾಲಮಿತಿಯೊಳಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು ? (ವಿವರ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕರ ವರ್ಗಾವಣೆ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೦ (೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕರ ವರ್ಗಾವಣೆಯಾದ ಕೊನೆಯ ವರ್ಷ ಯಾವುದು ; ಈ ವರ್ಷ ಉಪನ್ಯಾಸಕರ ವರ್ಗಾವಣೆಯ ಚಿಂತನೆಯು ಸರ್ಕಾರದ ಮುಂದಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಮತ್ತು ಮಂಜೂರಾದ ಹುದ್ದೆಗಳ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೧ (೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳೆಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಆ) ಹಾಲಿ ಎಷ್ಟು ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ ; ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ವಹಿಸಲಾಗಿದೆ ?

## ಕರೋನಾ ಲಾಕ್‌ಡೌನ್ ಮತ್ತು ಘೋಷಣೆ ಮಾಡಿರುವ ಪ್ಯಾಕೇಜ್ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೨ (೭೪) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರೋನಾ ಲಾಕ್‌ಡೌನ್‌ನಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟದ ನಡುವೆ ಹೂವು ಬೆಳೆದ ರೈತರು, ಕ್ಷೌರಿಕರು, ನೇಕಾರರು, ಕುಲಕಸುಬು ಆಧಾರಿತ ಶ್ರಮಿಕರು, ಕಟ್ಟಡ ಕಾರ್ಮಿಕರಿಗೆ ಘೋಷಣೆ ಮಾಡಿದ್ದ ಪ್ಯಾಕೇಜ್‌ನ್ನು ಎಷ್ಟು ಜನ ಫಲಾನುಭವಿಗಳು ಪಡೆದಿದ್ದಾರೆ; (ಮಾಹಿತಿ ನೀಡುವುದು)

(ಆ) ಕರೋನಾ ಲಾಕ್‌ಡೌನ್ ಸಂದರ್ಭದಲ್ಲಿ ಕಟ್ಟಡ ಕಾರ್ಮಿಕರಿಗೆ ಆಹಾರದ ಕಿಟ್, ಊಟ ಮತ್ತು ಪರಿಹಾರದ ಧನ ೫ ಸಾವಿರ ರೂಪಾಯಿಗಳನ್ನು ನೀಡಲಾಗಿದೆಯೇ ; ಪ್ರಸ್ತುತ ಎಷ್ಟು ಜನ ಫಲಾನುಭವಿಗಳು ಸದರಿ ಪರಿಹಾರದ ಮೊತ್ತವನ್ನು ಪಡೆದಿರುತ್ತಾರೆ;

(ಇ) ಕರೋನಾ ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕರನ್ನು ತಮ್ಮ– ತಮ್ಮ ಊರುಗಳಿಗೆ ಕಳುಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು ?

## ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಏಕರೂಪದ ಶೈಕ್ಷಣಿಕ ಕ್ಯಾಲೆಂಡರ್ ಜಾರಿಗೆ ತರುವ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೩ (೭೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಏಕರೂಪ ಶೈಕ್ಷಣಿಕ ಕ್ಯಾಲೆಂಡರ್‌ನ್ನು ಜಾರಿಗೆ ತರುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಆ) ಏಕರೂಪದ ಶೈಕ್ಷಣಿಕ ಕ್ಯಾಲೆಂಡರ್ ಜಾರಿಗೆ ಬರುವುದು ಯಾವಾಗ;

(ಇ) ಇದರಿಂದ ವಿದ್ಯಾರ್ಥಿಗಳಿಗೆ ಆಗುವ ಅನುಕೂಲ/ ಅನಾನುಕೂಲವೇನು ? (ವಿವರ ನೀಡುವುದು)

## ಕೋವಿಡ್ ಆಸ್ಪತ್ರೆಗಳಲ್ಲಿ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೪ (೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕೋವಿಡ್ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆಹಾರ ದೊರೆಯದಿರುವುದು, ವೆಂಟಿಲೇಟರ್, ಆಕ್ಸಿಜನ್, ಹಾಸಿಗೆ ಕೊರತೆಗಳಿಂದ ಸಮಸ್ಯೆಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಶಾಲೆಗಳಲ್ಲಿ ಕನ್ನಡ ಮತ್ತು ಆಂಗ್ಲ ಬೋಧನೆ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೫ (೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲೆಗಳನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಸಂಬಂಧ ಕನ್ನಡ ಮತ್ತು ಆಂಗ್ಲ ಭಾಷೆಯ ಬೋಧನೆ ನೀಡುವ ಹೊಸ ಚಿಂತನೆಯನ್ನು ಸರ್ಕಾರ ಆಲೋಚಿಸಿದೆಯೇ ;

(ಆ) ಹಾಗಿದ್ದಲ್ಲಿ, ಇದರಿಂದ ಕನ್ನಡ ಬೋಧನೆಯನ್ನು ನಿರ್ಲಕ್ಷಿಸಿದಂತಾಗುವುದಿಲ್ಲವೇ ; ಕನ್ನಡ ಭಾಷೆಯ ಬೋಧನೆಯೊಂದಿಗೆ ಆಂಗ್ಲ ಭಾಷೆಯನ್ನು ಬೋಧಿಸುವ ಸಂಬಂಧ ಅನುಸರಿಸಲಾಗುವ ಮಾರ್ಗೋಪಾಯಗಳೇನು ?

## ಕೋವಿಡ್ ಕಾಯಿಲೆಗೆ ಬಲಿಯಾದವರ ಅಂತ್ಯ ಸಂಸ್ಕಾರ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೬ (೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೋವಿಡ್ ಕಾಯಿಲೆಗೆ ಬಲಿಯಾದವರ ಮೃತದೇಹಗಳ ಅಂತಿಮ ಸಂಸ್ಕಾರಕ್ಕೆ ಹಲವು ಕಡೆಗಳಲ್ಲಿ ಉಂಟಾದ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ರೂಪಿಸಲಾದ ಮಾರ್ಗಸೂಚಿಗಳೇನು ;

(ಇ) ಮಾರ್ಗಸೂಚಿಗಳನ್ವಯ ಮೃತದೇಹಗಳ ಅಂತಿಮ ಸಂಸ್ಕಾರ ನಡೆಸದವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತಾ ಯೋಜನೆಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೭ (೧೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಈವರೆವಿಗೂ ಬೆಂಗಳೂರು ನಗರ/ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಹೆಸರು, ಯೋಜನೆಗಳ ಪ್ರತ್ಯೇಕ ವಿವರ ನೀಡುವುದು)

(ಆ) ಬೆಂಗಳೂರು ನಗರ/ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕೈಗಾರಿಕಾ ತರಬೇತಿ ಕೇಂದ್ರಗಳಿವೆ ; (ವಿವರ ನೀಡುವುದು)

(ಇ) ನಿರುದ್ಯೋಗ ನಿವಾರಣೆಯ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಯೋಜನೆಗಳಾವುವು ; ಹೊಸ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರದ ಕ್ರಮವೇನು ?

## ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮ (೧೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ೩೭೧(ಜೆ) ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಆ) ಕಲ್ಯಾಣ ಕರ್ನಾಟಕದಡಿ (ಹೈಕ) ಮೀಸಲಿಡಲಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದ ಶಿಕ್ಷಣದ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ರಾಜ್ಯದ ಸರ್ಕಾರಿ ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯ (೧೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ರಾಜ್ಯದ ಎಷ್ಟು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ ;

(ಇ) ಈ ಸೌಲಭ್ಯವನ್ನು ಹಾಲಿ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರದಲ್ಲಿದೆಯೇ ?

## ರಸ್ತೆ ಸುರಕ್ಷತೆ ವಿಷಯವನ್ನು ಪಠ್ಯದಲ್ಲಿ ಸೇರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦ (೧೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಸ್ತೆ ಸುರಕ್ಷತೆ ವಿಷಯವನ್ನು ಶಾಲೆಯ ಪಠ್ಯದಲ್ಲಿ ಸೇರಿಸುವ ಯೋಜನೆ ಸರ್ಕಾರಕ್ಕಿದೆಯೇ ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ;

(ಇ) ರಸ್ತೆ ಸುರಕ್ಷತೆ ಕುರಿತು ಮಕ್ಕಳಿಗೆ ಮನದಟ್ಟಾಗುವಂತೆ ತಿಳಿಸುವ ಪಠ್ಯಕ್ರಮವನ್ನು ರೂಪಿಸಲಾಗಿದೆಯೇ ; (ಮಾಹಿತಿ ಒದಗಿಸುವುದು)

(ಈ) ಯಾವ ಮಾದರಿಯ ಮುಖಾಂತರ ರಸ್ತೆ ಸುರಕ್ಷತೆ ಕುರಿತು ಶಿಕ್ಷಣ ಒದಗಿಸಲು ಪಠ್ಯಕ್ರಮವನ್ನು ಮಾಡಲಾಗಿದೆ ?

## ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧ (೧೩೯) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಬ್ಬು ಬೆಳೆಗಾರರ ಹಿತ ಕಾಪಾಡಲು ರಚಿಸಲಾಗಿರುವ ಸಕ್ಕರೆ ಹಾಗೂ ಕಬ್ಬು ನಿರ್ದೇಶನಾಲಯವು ರೈತರ ಬಗ್ಗೆ ಕಾಳಜಿ ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿನ ಅತಿವೃಷ್ಟಿ–ಅನಾವೃಷ್ಟಿಯ ಸಮಸ್ಯೆಗಳ ನಡುವೆ ರೈತರು ತಾವು ಬೆಳೆದು ಮಾರಾಟ ಮಾಡಿದ ಕಬ್ಬಿನ ಹಣ ಸಕಾಲದಲ್ಲಿ ಕೈಗೆ ಸಿಗದೇ ತತ್ತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ಕೊಟ್ಟ ಭರವಸೆ ಈಡೇರದೇ ವಿಫಲವಾಗಿದ್ದು ಬಾಕಿ ಮೊತ್ತ ಪಾವತಿ ಮಾಡಲಾಗದ ಕಾರ್ಖಾನೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕಬ್ಬು ಪೂರೈಸಿದ ೧೫ ದಿನಗಳಲ್ಲಿ ಹಣ ಪಾವತಿ ಮಾಡಬೇಕೆಂಬ ನಿಯಮವಿದ್ದರೂ ರೈತರ ಕೈಗೆ ಹಣ ಸಿಗದಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿಕ್ಷಣ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨ (೧೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಖಾಲಿ ಇರುವ ಬೋಧಕ–ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಇ) ಬೋಧಕರ ಕೊರತೆಯಿಂದ ಮಕ್ಕಳ ವಿದ್ಯಾಭ್ಯಾಸದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಖಾಲಿ ಉಳಿದಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇಲ್ಲದಿದ್ದಲ್ಲಿ, ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ಆರೋಗ್ಯ ಕರ್ನಾಟಕ ಆಶಯದ ಹೆಲ್ತ್ ರಿಜಿಸ್ಟರ್ ಯೋಜನೆ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೩ (೧೬೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಕರ್ನಾಟಕ ಆಶಯದ 'ಹೆಲ್ತ್ ರಿಜಿಸ್ಟರ್' ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಮುಂದಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು ?

## ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯ ಬಗ್ಗೆ

**ಶ್ರೀ ಸಿ.ಎಂ. ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೪೪ (೧೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ ; (ಜಿಲ್ಲಾವಾರು ಮತ್ತು ವಿಷಯವಾರು ವಿವರ ನೀಡುವುದು)

(ಆ) ಪಠ್ಯಕ್ರಮದಲ್ಲಿ ಆಯಾ ವಿಷಯಗಳಲ್ಲಿ ಪರಿಣಿತರಾದ ಶಿಕ್ಷಕರನ್ನೇ ನೇಮಿಸಲಾಗಿದೆಯೇ ;

(ಇ) ರಾಜ್ಯದಲ್ಲಿ ಪ್ರಸಕ್ತ ಮುಖ್ಯೋಪಾಧ್ಯಾಯರು ಅಗತ್ಯಕ್ಕಿಂತ ಅತೀ ಕಡಿಮೆ ಶಿಕ್ಷಕರನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ, ಈ ಸಮಸ್ಯೆ ಪರಿಹರಿಸಲು ಸರ್ಕಾರದ ಕ್ರಮವೇನು ?

## ಕೌಶಲ್ಯಾಭಿವೃದ್ಧಿ ಬಗ್ಗೆ ವಿವರ

**ಶ್ರೀ ಸಿ.ಎಂ.ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೪೫ (೧೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ಈವರೆವಿಗೂ ಬೆಂಗಳೂರು ನಗರ/ ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ಹೆಸರು, ಯೋಜನೆಗಳ ವಿವರ ನೀಡುವುದು)

(ಆ) ಬೆಂಗಳೂರು ನಗರ/ ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕೈಗಾರಿಕಾ ತರಬೇತಿ ಕೇಂದ್ರಗಳಿವೆ ; (ವಿವರ ನೀಡುವುದು)

(ಇ) ನಿರುದ್ಯೋಗ ನಿವಾರಣೆಯ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಯೋಜನೆಗಳಾವುವು ; ಹೊಸ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರದ ಮುಂದಿರುವ ಕ್ರಮವೇನು ?

## ಹೊಸದಾಗಿ ರಚಿಸಲಾದ ತಾಲ್ಲೂಕುಗಳ ಆಸ್ಪತ್ರೆಗಳಲ್ಲಿನ ಉಪಕರಣಗಳ ವಿವರಗಳು.

**ಶ್ರೀ ಸಿ.ಎಂ.ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೪೬ (೧೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸದಾಗಿ ರಚಿಸಲಾದ ತಾಲ್ಲೂಕುಗಳ ಆಸ್ಪತ್ರೆಗಳಿಗೆ ಕಳೆದ ಒಂದು ವರ್ಷದಿಂದ ಖರೀದಿಸಲಾದ ವೈದ್ಯಕೀಯ ಉಪಕರಣಗಳಾವುವು ;

(ಆ) ಪ್ರತಿ ಆಸ್ಪತ್ರೆಗೆ ಸರಾಸರಿ ಎಷ್ಟು ಮೊತ್ತದ ಉಪಕರಣಗಳನ್ನು ಖರೀದಿಸಲಾಗಿದೆ ;

(ಇ) ಹೊಸದಾಗಿ ಖರೀದಿಸಲಾದ ವೈದ್ಯಕೀಯ ಉಪಕರಣಗಳು ಯಂತ್ರಗಳನ್ನು ನಿರ್ವಹಿಸಲು ನುರಿತ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ ; (ಸಂಪೂರ್ಣ ವಿವರವನ್ನು ತಾಲ್ಲೂಕುವಾರು ನೀಡುವುದು)

(ಈ) ಇಲ್ಲದಿದ್ದರೆ, ಜನರ ಆರೋಗ್ಯದ ನಿರ್ವಹಣೆ ಹೇಗೆ ಮಾಡಲಾಗುತ್ತಿದೆ ?

## ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಗಳ ಮೂಲ ಸೌಕರ್ಯಗಳ ಬಗ್ಗೆ

**ಶ್ರೀ ಸಿ.ಎಂ.ಲಿಂಗಪ್ಪ (ನಾಮನಿರ್ದೇಶನ ಹೊಂದಿದವರು) :–**

೪೭ (೧೨೪) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಕ್ಕೆ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು ;

(ಆ) ಈ ವಿಶ್ವವಿದ್ಯಾಲಯದ ಕಟ್ಟಡ ಮತ್ತು ಮೂಲ ಸೌಕರ್ಯಗಳಿಗೆ ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ;

(ಈ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ?

## ಅತಿಥಿ ಉಪನ್ಯಾಸಕರ ಸಮಸ್ಯೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೪೮ (೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಕಳೆದ ಶೈಕ್ಷಣಿಕ ವರ್ಷದಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರ ಸೇವೆಯನ್ನು ಪ್ರಸಕ್ತ ಶೈಕ್ಷಣಿಕ ಸಾಲಿಗೂ ಮುಂದುವರೆಸಲು ಸರ್ಕಾರ ತೀರ್ಮಾನಿಸಿದೆಯೇ ;

(ಆ) ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅವರ ಗೌರವಧನ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಗೌರವಧನ ಪರಿಷ್ಕರಣೆ ಮಾಡಲಾಗುವುದು ;

(ಉ) ಸಹಾಯಕ ಪ್ರಾಧ್ಯಾಪಕರ ಮುಂದಿನ ನೇಮಕಾತಿಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಕೃಪಾಂಕ ನೀಡಿ, ವಯೋಮಿತಿ ಸಡಿಲಿಕೆ ಮಾಡಲಾಗುವುದೆ ;

(ಊ) ಹಾಗಾದಲ್ಲಿ, ಯಾವ ಪ್ರಮಾಣದ ಕೃಪಾಂಕ ಮತ್ತು ವಯೋಮಿತಿ ಸಡಿಲಿಕೆ ಮಾಡಲಾಗುವುದು ?

## ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೪೯ (೮೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳು ಯಾವುವು ; (ವಿವರ ನೀಡುವುದು)

(ಆ) ಈ ಮಹಾವಿದ್ಯಾಲಯಗಳಲ್ಲಿ ಪ್ಯಾರಾ ಮೆಡಿಕಲ್ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸ್ಟಾಫ್ ನರ್ಸ್, ಟೆಕ್ನಿಷಿಯನ್ ಹಾಗೂ ಇನ್ನಿತರೆ ಸಿಬ್ಬಂದಿಗಳ ಮಾಹಿತಿ ನೀಡುವುದು)

(ಇ) ಬಂದಿದ್ದಲ್ಲಿ, ಯಾವ, ಯಾವ ಮಹಾವಿದ್ಯಾಲಯಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; (ವರ್ಗವಾರು ಪೂರ್ಣ ವಿವರ ನೀಡುವುದು)

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿಕ್ಷಕರಿಗೆ ವಿಶೇಷ ಭತ್ಯೆ ಹಿಂಪಡೆಯುವ ಆದೇಶ ರದ್ದತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೫೦ (೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ: ೧–೦೮–೨೦೦೮ ನಂತರ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ನೇಮಕಾತಿ/ ಬಡ್ತಿ ಹೊಂದಿದ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಭತ್ಯೆಯನ್ನು ಹಿಂಪಡೆಯಲು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ಹಿಂಪಡೆಯಲು ಕಾರಣಗಳೇನು ; (ವಿವರ ನೀಡುವುದು)

(ಈ) ಹಿಂಪಡೆದಿರುವ ಆದೇಶವನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುವುದು ?

## ವಿಶ್ವವಿದ್ಯಾಲಯಗಳ ಬ್ಯಾಕ್‌ಲಾಗ್ ಹುದ್ದೆ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೫೧ (೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಭರ್ತಿ ಮಾಡಬೇಕಾದ ಬೋಧಕ/ ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ವಿಶ್ವವಿದ್ಯಾನಿಲಯವಾರು, ವಿಷಯವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ಸದರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಲ್ಲಿನ ವಿಳಂಬಕ್ಕೆ ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಕೋವಿಡ್-೧೯ರ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲೆ ಸರ್ಕಾರಿ ಆಸ್ಪತ್ರೆಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):-**

೫೨ (೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿರುವ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಕೊರೋನಾ ೧೯ ಸಾಂಕ್ರಾಮಿಕ ರೋಗ ಎಂದು ಪರಿಗಣಿಸಿದ ದಿನಾಂಕದಿಂದ ಇಲ್ಲಿಯತನಕ ಈ ಆಸ್ಪತ್ರೆಗಳ ಮೂಲಭೂತ ಅವಶ್ಯಕತೆಗಾಗಿ ಮಂಜೂರು ಮಾಡಿದ ಅನುದಾನವೆಷ್ಟು ; ಬಿಡುಗಡೆ ಮಾಡಲಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನ ಎಷ್ಟು ; (ಸಂಸ್ಥೆಯವಾರು ವಿವರವನ್ನು ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕೋವಿಡ್ ೧೯ ವೈರಸ್ ಪತ್ತೆ ಮಾಡುತ್ತಿರುವ ಖಾಸಗಿ ಮತ್ತು ಸರ್ಕಾರಿ ಪ್ರಯೋಗಾಲಯಗಳು ಯಾವುವು ; ಈ ಪರೀಕ್ಷಾ ಕೇಂದ್ರದಲ್ಲಿ ನಡೆಸಲಾದ RT PCR ಮತ್ತು RAPID ANTIGEN TEST ಪರೀಕ್ಷೆಗಳ ಸಂಖ್ಯೆ ಎಷ್ಟು ; (ಖಾಸಗಿ ಮತ್ತು ಸರ್ಕಾರಿ ಪ್ರಯೋಗಲಾಯದ ಪರೀಕ್ಷೆವಾರು, ತಿಂಗಳುವಾರು ಮಾಹಿತಿಯನ್ನು ಒದಗಿಸುವುದು)

(ಇ) ಈ ಸಂಬಂಧ ಖಾಸಗಿ ಪ್ರಯೋಗಾಲಯಗಳಿಗೆ ಪಾವತಿಸಿದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿಯಿರುವ ಮೊತ್ತವೆಷ್ಟು ; (ಖಾಸಗಿ ಪ್ರಯೋಗಾಲಯದ ಪರೀಕ್ಷೆವಾರು, ತಿಂಗಳುವಾರು ಮಾಹಿತಿಯನ್ನು ಒದಗಿಸುವುದು)

(ಈ) ಉಡುಪಿ ಜಿಲ್ಲೆಯಲ್ಲಿ ಸ್ಥಾಪಿಸಲಾದ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಆರೈಕೆ ಪಡೆದ ರೋಗಿಗಳ ಸಂಖ್ಯೆ ಎಷ್ಟು ; ಅವುಗಳ ನಿರ್ವಹಣೆಗೆ ಮತ್ತು ರೋಗಿಗಳ ಆರೈಕೆಗೆ ಮಂಜೂರು ಮಾಡಿದ ಅನುದಾನವೆಷ್ಟು ; ಬಿಡುಗಡೆ ಮಾಡಲಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನ ಎಷ್ಟು ? (ಕೇಂದ್ರವಾರು ತಿಂಗಳುವಾರು ಮಾಹಿತಿಯನ್ನು ಒದಗಿಸುವುದು)

## ಕೋವಿಡ್–೧೯ರ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನ ಶೈಕ್ಷಣಿಕ ವ್ಯವಸ್ಥೆಯ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೫೩ (೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಶೈಕ್ಷಣಿಕ ಸಾಲಿನಲ್ಲಿ ಯಾವ ಯಾವ ತರಗತಿಗಳ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಡೆಸಿ ಫಲಿತಾಂಶವನ್ನು ನೀಡಲಾಗಿರುತ್ತದೆ ; ಯಾವ ಯಾವ ತರಗತಿಗಳ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಡೆಸದೆಯೇ ಫಲಿತಾಂಶವನ್ನು ನೀಡಲಾಗಿರುತ್ತದೆ ;

(ಆ) ರಾಜ್ಯದಲ್ಲಿ ೨೦೨೦–೨೧ನೇ ಶೈಕ್ಷಣಿಕ ಸಾಲಿನ ಅರ್ಧ ಶೈಕ್ಷಣಿಕ ವರ್ಷವು ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಪ್ರಮುಖವಾಗಿ ಹತ್ತನೇ ತರಗತಿ ಮತ್ತು ಪಿಯುಸಿ ತರಗತಿಯ ವಿದ್ಯಾರ್ಥಿಗಳಿಗೆ ಯಾವ ಪಠ್ಯಕ್ರಮವನ್ನು ಯೋಜಿಸಲಾಗಿದೆ ;

(ಇ) ಕೋವಿಡ್–೧೯ರ ಹಿನ್ನೆಲೆಯಲ್ಲಿ ಶಾಲೆಯನ್ನು ಪ್ರಾರಂಭಿಸದ ಕಾರಣದಿಂದ ಖಾಸಗಿ ಶಾಲೆಗಳ ಬೋಧನಾ ಶುಲ್ಕದಲ್ಲಿ ರಿಯಾಯಿತಿಯನ್ನು ನೀಡಲಾಗಿದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರ ಯಾವ ಚಿಂತನೆಯನ್ನು ಹೊಂದಿದೆ ; ಖಾಸಗಿ ಶಾಲೆಗಳು ಶಾಲಾ ಪ್ರಾರಂಭಿಸದೆ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿ ಕೋವಿಡ್–೧೯ರ ನಿಯಂತ್ರಣಕ್ಕಾಗಿ ಶಾಲೆಯನ್ನು ಪ್ರಾರಂಭಿಸದ ಹಿನ್ನೆಲೆಯಲ್ಲಿ ಯಾವ ಯಾವ ತರಗತಿಯ ವಿದ್ಯಾರ್ಥಿಗಳಿಗೆ ಆನ್‌ಲೈನ್ ಶಿಕ್ಷಣಕ್ಕೆ ಅವಕಾಶವನ್ನು ನೀಡಲಾಗಿರುತ್ತದೆ; ಆನ್‌ಲೈನ್ ಶಿಕ್ಷಣ ವ್ಯವಸ್ಥೆಯನ್ನು ಹೊಂದಲಾರದ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಯಾವ ರೀತಿಯ ಪೂರಕ ಕ್ರಮವನ್ನು ಕೈಗೊಳ್ಳಲಾಗಿರುತ್ತದೆ ?

## ಕಾಡುಪ್ರಾಣಿ ಹಾವಳಿಯಿಂದ ಬೆಳೆನಾಶ ಹೊಂದಿರುವ ರೈತರಿಗೆ ಪರಿಹಾರ ಧನ ನೀಡುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೫೪ (೪೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿ ೨೦೧೭ರ ಹಿಂದೆ ರೈತರು ಕಾಡುಪ್ರಾಣಿಗಳಿಂದ ಬೆಳೆನಾಶದ ಪರಿಹಾರ ಕೋರಿ ಸಲ್ಲಿಸಿದ ಅರ್ಜಿಗಳಲ್ಲಿ ಇತ್ಯರ್ಥವಾಗದೇ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಕೋರಿದ ಪರಿಹಾರಧನದ ಮೊತ್ತವೆಷ್ಟು ; (ವಲಯವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ೨೦೧೭ರ ನಂತರ ಕಾಡುಪ್ರಾಣಿಗಳಿಂದ ಬೆಳೆನಾಶದ ಪರಿಹಾರ ಕೋರಿ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ ಹಾಗೂ ಪರಿಹಾರಧನದ ಮೊತ್ತವೆಷ್ಟು, ಇತ್ಯರ್ಥಪಡಿಸಿದ ಅರ್ಜಿಗಳ ಸಂಖ್ಯೆ ಮತ್ತು ಪರಿಹಾರಧನವೆಷ್ಟು ; ಇತ್ಯರ್ಥವಾಗದೇ ಬಾಕಿಯಿರುವ ಅರ್ಜಿಗಳ ಸಂಖ್ಯೆ ಹಾಗೂ ಪರಿಹಾರಧನದ ಮೊತ್ತವೆಷ್ಟು ; (ವಲಯವಾರು ಮಾಹಿತಿಯನ್ನು ಒದಗಿಸುವುದು)

(ಇ) ಈ ಪರಿಹಾರಧನ ಕೋರಿ ಸಲ್ಲಿಸಿದ ಅರ್ಜಿಗಳ ಇತ್ಯರ್ಥಪಡಿಸುವ ಮತ್ತು ಅನುದಾನ ಬಿಡುಗಡೆಯ ವಿಳಂಬದಿಂದ ರೈತರು ಸಂಕಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಕಾಡುಪ್ರಾಣಿಯಿಂದ ಬೆಳೆನಾಶದ ಪರಿಹಾರ ಕೋರಿಕೆ ಅರ್ಜಿಯನ್ನು ಸಕಾಲದ ವ್ಯಾಪ್ತಿಗೆ ತರುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರಣವೇನು ?

## ಕೋವಿಡ್–೧೯ರ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳ ಮೂಲಭೂತ ಸೌಕರ್ಯದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

*೫೫* (*೫೫*) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕೋವಿಡ್–೧೯ರ ರೋಗ ಹರಡುವಿಕೆಯು ಪ್ರಾರಂಭಗೊಂಡ ದಿನಾಂಕ: ೨೩–೦೩–೨೦೨೦ ರಿಂದ ಇಲ್ಲಿಯವರೆಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಕಾಲೇಜು/ಆಸ್ಪತ್ರೆಗಳು ಯಾವುವು ; ಅವುಗಳ ಮೂಲಭೂತ ಸೌಕರ್ಯಕ್ಕಾಗಿ ಮಂಜೂರು ಮಾಡಲಾದ ಅನುದಾನ ಎಷ್ಟು ; ವೆಚ್ಚ ಮಾಡಲಾದ ಅನುದಾನ

ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಆಸ್ಪತ್ರೆಗಳ ಮಾಹಿತಿಯೊಂದಿಗೆ ವಿವರ ಒದಗಿಸುವುದು)

## ಕೋವಿಡ್–೧೯ರ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳ ಮೂಲಭೂತ ಸೌಕರ್ಯದ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೫೬ (೫೫)ಎ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್–೧೯ರ ರೋಗ ಘೋಷಣೆಯಾಗುವ ಪೂರ್ವದಲ್ಲಿ ರಾಜ್ಯಾದ್ಯಂತ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಇದ್ದಂತಹ ಮೂಲಭೂತ ಸೌಕರ್ಯಗಳಾವುವು (ಐ.ಸಿ.ಯು, ವೆಂಟಿಲೇಟರ್, ಡಯಾಲಿಸೀಸ್ ಇತ್ಯಾದಿ) ಅದೇ ಆಸ್ಪತ್ರೆಗಳಲ್ಲಿ ಪ್ರಸ್ತುತ ಇರುವ ಮೂಲಭೂತ ಸೌಕರ್ಯಗಳಾವುವು ; (ಜಿಲ್ಲಾವಾರು, ತಾಲ್ಲೂಕುವಾರು ಆಸ್ಪತ್ರೆವಾರು, ತುಲನಾತ್ಮಕ ಪಟ್ಟಿ ಒದಗಿಸುವುದು)

(ಆ) ಕೋವಿಡ್ ರೋಗಿಗಳ ಚಿಕಿತ್ಸಾ ವೆಚ್ಚಕ್ಕಾಗಿ ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆಗಳಿಗೆ ಮರು ಪಾವತಿ ಮಾಡಲಾದ ಮೊತ್ತ ಎಷ್ಟು ; (ಆಸ್ಪತ್ರೆವಾರು ವಿವರ ಒದಗಿಸುವುದು) ಹಾಗೂ ಖಾಸಗಿ ಆಸ್ಪತ್ರೆಗಳಿಗೆ ಮರು ಪಾವತಿ ಮಾಡಲಾದ ಮೊತ್ತ ಎಷ್ಟು ; (ಆಸ್ಪತ್ರೆವಾರು ವಿವರ ಒದಗಿಸುವುದು)

(ಇ) ರಾಜ್ಯಾದ್ಯಂತ ಜಿಲ್ಲಾವಾರು ನಿರ್ವಹಿಸಲಾದ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಆರೈಕೆ ಪಡೆದ ರೋಗಿಗಳ ಸಂಖ್ಯೆ ಮತ್ತು ಆರೈಕೆಗಾಗಿ ವೆಚ್ಚ ಮಾಡಲಾದ ಅನುದಾನ ಎಷ್ಟು ? (ಜಿಲ್ಲಾವಾರು, ಆರೈಕೆ ಕೇಂದ್ರವಾರು ಮಾಹಿತಿ ಒದಗಿಸುವುದು)

## ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿರುವ ಕೊರೋನ ಸಕ್ರೀಯ ಪ್ರಕರಣಗಳು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭ (೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಸಕ್ರೀಯವಿರುವ ಒಟ್ಟು ಕೋವಿಡ್ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಜಿಲ್ಲೆಗಳಲ್ಲಿ ಆಸ್ಪತ್ರೆಯಿಂದ ಬಿಡುಗಡೆಗೊಂಡಿರುವ ಒಟ್ಟು ರೋಗಿಗಳ ಸಂಖ್ಯೆ ಎಷ್ಟು ; ಹಾಗೂ ಕೋವಿಡ್ ರೋಗಿಗಳಿಗೆ ಸರ್ಕಾರದಿಂದ ಭರಿಸಿರುವ ದೈನಂದಿನ ಖರ್ಚು–ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಮೇಲ್ಕಂಡ ಜಿಲ್ಲೆಗಳಲ್ಲಿ ಕೋವಿಡ್ ರೋಗಿಗಳಿಗೆ ಕೋವಿಡ್ ಕೇರ್ ಸೆಂಟರ್ ಹಾಗೂ ಆಸ್ಪತ್ರೆಗಳಲ್ಲಿ ಒದಗಿಸಲಾಗುತ್ತಿದ್ದ ಸೌಲಭ್ಯಗಳೇನು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಸದರಿ ಜಿಲ್ಲೆಗಳಲ್ಲಿ ಕೋವಿಡ್ ರೋಗಿಗಳ ಚಿಕಿತ್ಸೆ ಹಾಗೂ ಊಟ ಮತ್ತು ವಸತಿ ಸೌಕರ್ಯಕ್ಕಾಗಿ ಖರ್ಚಾಗುತ್ತಿದ್ದ ಒಟ್ಟು ಖರ್ಚು ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರಾಜ್ಯಾದ್ಯಂತ ವೈದ್ಯಕೀಯ ವೇಸ್ಟೇಜ್‌ಗಳನ್ನು ಸಂಗ್ರಹಿಸುವ ಮೆಡಿಕಲ್ ಬಯೋವೇಸ್ಟೇಜ್‌ಗಳ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೫೮ (೧೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ವೈದ್ಯಕೀಯ ತ್ಯಾಜ್ಯಗಳನ್ನು ಸಂಗ್ರಹಿಸುವ ಮೆಡಿಕಲ್ ಬಯೋವೇಸ್ಟೇಜ್‌ಗಳ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಬಯೋವೇಸ್ಟೇಜ್‌ಗಳ ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ;

(ಇ) ವೈದ್ಯಕೀಯ ತ್ಯಾಜ್ಯಗಳನ್ನು ಸಂಗ್ರಹಿಸುವ ಮೆಡಿಕಲ್ ಬಯೋವೇಸ್ಟೇಜ್‌ಗಳ ಘಟಕಗಳನ್ನು ನೂತನವಾಗಿ ಪ್ರಾರಂಭಿಸಬೇಕಾದಲ್ಲಿ ಅನ್ವಯಿಸುವ ನಿಯಮ. ಷರತ್ತುಗಳು ಹಾಗೂ ಮಾನದಂಡಗಳೇನು ?

## ಕೊರೋನಾ ನಿಯಂತ್ರಿಸಲು ರಾಜ್ಯಾದ್ಯಂತ ನಿಗದಿಪಡಿಸಿರುವ ಕೋವಿಡ್ ಕೇರ್ ಸೆಂಟರ್ ಹಾಗೂ ಆಸ್ಪತ್ರೆಗಳ ವಿವರ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೫೯ (೧೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊರೋನಾ ರೋಗವನ್ನು ನಿಯಂತ್ರಿಸಲು ರಾಜ್ಯಾದ್ಯಂತ ನಿಗದಿಪಡಿಸಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳು ಹಾಗೂ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯಾದ್ಯಂತ ಕೊರೋನಾ ನಿಯಂತ್ರಣಕ್ಕಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಆಸ್ಪತ್ರೆಗಳು. ಖಾಸಗಿ ಆಸ್ಪತ್ರೆಗಳು ಹಾಗೂ ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಲಭ್ಯವಿರುವ ವೆಂಟಿಲೇಟರ್‌ಗಳ ಸಂಖ್ಯೆ ಎಷ್ಟು ;

(ಇ) ರಾಜ್ಯಾದ್ಯಂತ ಕೊರೋನಾದಿಂದ ಬಳಲುತ್ತಿರುವ ರೋಗಿಗಳಿಗೆ ಸರಿಯಾದ ಸಮಯದಲ್ಲಿ ವೆಂಟಿಲೇಟರ್‌ಗಳು ಲಭ್ಯವಾಗದ ಕಾರಣ ಪ್ರಾಣ ಕಳೆದುಕೊಂಡಿರುವುದು ಹಾಗೂ ಸಾವಿರಾರು ರೋಗಿಗಳು ವೆಂಟಿಲೇಟರ್‌ಗಳ ಕೊರತೆಯಿಂದ ತೊಂದರೆಗೀಡಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯಾದ್ಯಂತ ವೆಂಟಿಲೇಟರ್‌ಗಳ ಕೊರತೆಗೆ ಕಾರಣಗಳೇನು ; ವೆಂಟಿಲೇಟರ್ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೋವಿಡ್–೧೯ಗೆ ರೈಲು ಬೋಗಿಗಳನ್ನು ಬೆಡ್‌ಗಳಾಗಿ ನಿರ್ಮಿಸಿರುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೬೦ (೧೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ –೧೯ ಸಾಂಕ್ರಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ದೇಶ್ಯಾದ್ಯಂತ ಎಲ್ಲ ರಾಜ್ಯಗಳಲ್ಲಿಯೂ ರೈಲು ಬೋಗಿಗಳಲ್ಲಿ ಸುಸಜ್ಜಿತ ಬೆಡ್ ಹಾಗೂ ವೈದ್ಯಕೀಯ ಸಲಕರಣೆಗಳನ್ನೊಳಗೊಂಡ ರೈಲ್ವೆ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ ಎಂದು ಹೇಳಿರುವುದು ನಿಜವೇ ;

(ಆ) ರಾಜ್ಯಾದ್ಯಂತ ಒಟ್ಟು ಎಷ್ಟು ರೈಲು ಬೋಗಿಗಳಲ್ಲಿ ಕೋವಿಡ್ ಕೇರ್ ಸೆಂಟರ್‌ಗಳನ್ನು ತೆರೆಯಲಾಗಿದೆ ; ಪ್ರತಿ ಕೋವಿಡ್ ಕೇರ್

ಸೆಂಟರ್ ರೈಲು ಬೋಗಿಗಳಲ್ಲಿ ಚಿಕಿತ್ಸೆ ಪಡೆದ ರೋಗಿಗಳ ಸಂಖ್ಯೆ ಎಷ್ಟು ;

(ಇ) ಪ್ರತಿ ಕೋವಿಡ್ ಕೇರ್ ಸೆಂಟರ್ ರೈಲು ಬೋಗಿಗೆ ಎಷ್ಟು ಜನ, ವೈದ್ಯರು ಹಾಗೂ ಇತರೆ ಸಿಬ್ಬಂದಿಗಳನ್ನು ನಿಯೋಜಿಸಲಾಗಿತ್ತು; ಕೋವಿಡ್ ಕೇರ್ ಸೆಂಟರ್ ರೈಲು ಬೋಗಿಗೆ ಖರ್ಚಾದ ಒಟ್ಟು ಮೊತ್ತವೆಷ್ಟು ?

## ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ವಿವರ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೧ (೧೨೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರತಿ ವರ್ಷ ಸ್ನಾತಕೋತ್ತರ ಶಿಕ್ಷಣ ಪಡೆಯಲು ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಶಿಕ್ಷಣ ಸಂಸ್ಥೆಗಳ ಪ್ರವೇಶ ಪಡೆದ ವಿದ್ಯಾರ್ಥಿಗಳಲ್ಲಿ ರಾಜ್ಯದ ವಿದ್ಯಾರ್ಥಿಗಳೆಷ್ಟು ; ಹೊರ ರಾಜ್ಯದ ವಿದ್ಯಾರ್ಥಿಗಳೆಷ್ಟು ; (ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿ ವಿದ್ಯಾರ್ಥಿ ವೈದ್ಯಕೀಯ ಶಿಕ್ಷಣ ಪಡೆಯಲು ಸರ್ಕಾರ ಮಾಡುತ್ತಿರುವ ತಲಾವಾರು ವೆಚ್ಚವೆಷ್ಟು ? (ವಿವರ ನೀಡುವುದು)

# ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೨ (೧೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕ ಮಾಡಲು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆಯೇ ; ಹೊರಡಿಸಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ನೀಡುವುದು ;

(ಆ) ಪ್ರಸ್ತುತ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಈಗಾಗಲೇ ಎಷ್ಟು ಜನರಿಗೆ ನೇಮಕಾತಿ ಆದೇಶ ನೀಡಲಾಗಿದೆ ಹಾಗೂ ಬಾಕಿ ಉಳಿದಿರುವ ಸಂಖ್ಯೆ ಎಷ್ಟು ;

(ಈ) ಉಳಿದವರಿಗೆ ನೇಮಕಾತಿ ನೀಡಲು ಉಂಟಾಗಿರುವ ಸಮಸ್ಯೆಗಳೇನು;

(ಉ) ನೇಮಕಾತಿ ಮಾಡಲು ಸಮಿತಿ ರಚಿಸಲಾಗಿತ್ತೆ ; ಸಮಿತಿಯು ವರದಿಯನ್ನು ನೀಡಲಾಗಿದೆಯೇ ; (ನೀಡಿದ್ದಲ್ಲಿ ಅದರ ಪ್ರತಿ ನೀಡುವುದು)

## ಕೋಲಾರ ಜಿಲ್ಲೆಯ ಶ್ರೀ ನರಸಿಂಹರಾಜ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩ (೧೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಶ್ರೀ ನರಸಿಂಹರಾಜ ಆಸ್ಪತ್ರೆಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ವೈದ್ಯಕೀಯ ಸಲಕರಣೆಗಳ (ಮೂಲಭೂತ ಸೌಕರ್ಯ) ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ವೈದ್ಯಕೀಯ ಸೌಲಭ್ಯಗಳಿಲ್ಲದೆ ರೋಗಿಗಳು ಪರದಾಡುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಆಸ್ಪತ್ರೆಗೆ ಅಗತ್ಯವಿರುವ ವೈದ್ಯಕೀಯ ಸಲಕರಣೆಗಳನ್ನು ಖರೀದಿಸಲು ಸರ್ಕಾರ ಯೋಚಿಸಿದೆಯೇ ;

(ಈ) ಈ ಬಗ್ಗೆ ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಿದೆ ?

## ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ಪ್ರಾತಿನಿಧ್ಯದ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೪ (೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಪ್ರವರ್ಗ ಒಂದರಲ್ಲಿ ೯೫ ಜಾತಿಗಳಿದ್ದು ಈ ಜಾತಿಗಳಿಗೆ ಕೇವಲ ೪% ಮೀಸಲಾತಿ ಇದ್ದು

ಪ್ರವರ್ಗ ೨(Q) ನಲ್ಲಿ ೧೦೨ ಜಾತಿಗಳಿವೆ ಇಲ್ಲಿ ೧೫% ಮೀಸಲಾತಿ ಇದೆ ಈ ಎರಡೂ ಪ್ರವರ್ಗಗಳಲ್ಲಿರುವ ಜಾತಿಗಳ ವ್ಯತ್ಯಾಸ ಕೇವಲ ಏಳು(೭) ಆದರೆ ಮೀಸಲಾತಿಯಲ್ಲಿನ ವ್ಯತ್ಯಾಸ ಇರುವುದಕ್ಕೆ ಕಾರಣ ಏನು: ಇದಕ್ಕೆ ಇರುವ ಮಾನದಂಡ ಏನು;

(ಆ) ಪ್ರವರ್ಗ ೨(Q) ನಲ್ಲಿ ೧೦೨ ಜಾತಿಗಳಿದ್ದು ೧೫% ಮೀಸಲಾತಿ ಇದ್ದು ೨೫ ವರ್ಷಗಳಲ್ಲಿ ಇಲ್ಲಿರುವ ೧೦೨ ಜಾತಿಗಳಲ್ಲಿ ಯಾವ ಯಾವ ಜಾತಿಗೆ ಎಷ್ಟೆಷ್ಟು ಹುದ್ದೆ ಸಿಕ್ಕಿವೆ ; (ವಿವರ ನೀಡುವುದು)

(ಇ) ಕೆ.ಪಿ.ಎಸ್.ಸಿ. ಯಲ್ಲಿ ಈವರೆಗೂ ಪ್ರವರ್ಗ ೨(Q) ನಲ್ಲಿ ಯಾವ ಯಾವ ಜಾತಿಗೆ ಎಷ್ಟೆಷ್ಟು ಪ್ರಾತನಿಧ್ಯ ಸಿಕ್ಕಿದೆ (ವಿವರ ನೀಡುವುದು)

(ಈ) ದೇವರಾಜ ಅರಸು ಅಭಿವೃದ್ಧಿ ನಿಗಮದಲ್ಲಿ ಕಳೆದ ಹತ್ತು ವರ್ಷಗಳಿಂದ ಯಾವ ಯಾವ ಜಾತಿಗಳಿಗೆ ಎಷ್ಟೆಷ್ಟು ಸಾಲ, ಸಬ್ಸಿಡಿ, ನೆರವು ಮತ್ತು ತರಬೇತಿ ನೀಡಲಾಗಿದೆ ? (ವಿವರ ನೀಡುವುದು)

## ಅಭಿವೃದ್ಧಿ ಪ್ರಾಧಿಕಾರ ಮಾಡಲು ಇರುವ ಮಾನದಂಡಗಳ ಕುರಿತು

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೬೫ (೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಹಿಂದುಳಿದ ವರ್ಗಗಳ ಇಲಾಖೆಯ ಎಷ್ಟು ಅಭಿವೃದ್ಧಿ ಪ್ರಾಧಿಕಾರಗಳಿವೆ ; ಅವು ಯಾವುವು ;

(ಆ) ಯಾವುದೇ ದೇವಸ್ಥಾನ ಅಥವಾ ಪವಾಡ ಪುರುಷರ ಸ್ಥಳಗಳನ್ನು ಪ್ರಾಧಿಕಾರವನ್ನಾಗಿ ಸರ್ಕಾರ ಮಾಡಿದರೆ ಹಿಂದಿನಿಂದ ಬಂದಂತಹ

ಆಚಾರ–ವಿಚಾರ, ಸಂಪ್ರದಾಯ ಕಟ್ಟುಪಾಡು ಮತ್ತು ಅದಕ್ಕೆ ಸಂಬಂಧಿಸಿದ ಆಸ್ತಿಗಳನ್ನು ಸರ್ಕಾರ ಆಕ್ರಮಿಸಿಕೊಳ್ಳುವುದೇ ;

(ಇ) ಅಭಿವೃದ್ಧಿ ಪ್ರಾಧಿಕಾರ ಮಾಡಲು ಇರುವ ಮಾನದಂಡಗಳೇನು?

## ವಿಶ್ವಕರ್ಮ ಅಭಿವೃದ್ಧಿ ನಿಗಮದಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡದಿರುವ ಕುರಿತು

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬ (೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೩೦ ಜಿಲ್ಲೆಗಳ ವಿಶ್ವಕರ್ಮ ಅಭಿವೃದ್ಧಿ ನಿಗಮದಲ್ಲಿ ಖಾಯಂ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆಯೇ ; (ಜಿಲ್ಲಾವಾರು ಸಿಬ್ಬಂದಿಗಳ ವಿವರ ತಿಳಿಸುವುದು)

(ಆ) ನೇಮಕ ಮಾಡಿಕೊಳ್ಳದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನೇಮಕಾತಿ ಮಾಡಿಕೊಳ್ಳಲಾಗುವುದು ?

## ವಿಶ್ವಕರ್ಮ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡಿರುವ ಕುರಿತು

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೬೭ (೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ವಿಶ್ವಕರ್ಮ ಅಭಿವೃದ್ಧಿ ನಿಗಮ ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ನಿಗಮಕ್ಕೆ ನೀಡಲಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ೨೦೨೦–೨೦೨೧ನೇ ಸಾಲಿನ ಆಯವ್ಯಯದಲ್ಲಿ ೨೫ ಕೋಟಿಗಳ ಅನುದಾನ ನಿಗದಿಯಾಗಿದ್ದು, ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ನಿಗಮದ ಸೌಲಭ್ಯ ಕೋರಿ ಸ್ವೀಕೃತಿಗೊಂಡ ಅರ್ಜಿಗಳೆಷ್ಟು ; ಮಂಜೂರಾದ ಅರ್ಜಿಗಳೆಷ್ಟು ; ಬಾಕಿ ಉಳಿದಿರುವ ಅರ್ಜಿಗಳೆಷ್ಟು ?

## ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿ ನೀಡುವ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೬೮ (೧೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಒಳ ಮೀಸಲಾತಿಯನ್ನು ರಾಜ್ಯ ಸರ್ಕಾರಗಳೇ ಕೊಡಬಹುದು ಎಂಬ ಆಶಯವನ್ನು ಸುಪ್ರೀಂ ಕೋರ್ಟ್ ಈಚೆಗೆ ತನ್ನ ತೀರ್ಪಿನಲ್ಲಿ ನೀಡಿದ್ದು, ಪರಿಶಿಷ್ಠ ಜಾತಿಯಲ್ಲಿ ಒಳ ಮೀಸಲಾತಿ ನೀಡಲು ನ್ಯಾಯಮೂರ್ತಿ ಸದಾಶಿವ ಆಯೋಗವು ಮಾನದಂಡ ನೀಡಿದ್ದು, ಅದರಂತೆ ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿ ನೀಡಲು ರಾಜ್ಯ ಸರ್ಕಾರ ಯಾವ ಮಾನದಂಡವನ್ನು ಅನುಸರಿಸುವುದು? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಐ.ಟಿ.ಐ.ಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೬೯ (೧೦೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಐ.ಟಿ.ಐ.ಗಳ ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಸ್ವಂತ ಕಟ್ಟಡಗಳಿರುವ ಐ.ಟಿ.ಐ.ಗಳ ಸಂಖ್ಯೆ ಎಷ್ಟು;

(ಇ) ಸ್ವಂತ ಕಟ್ಟಡ ಇಲ್ಲದೇ ಇರುವ ಐ.ಟಿ.ಐ. ಗಳಿಗೆ ಸ್ವಂತ ಕಟ್ಟಡಗಳನ್ನು ಯಾವ ಕಾಲಮಿತಿಯೊಳಗೆ ನಿರ್ಮಿಸಿ ಕೊಡಲಾಗುವುದು ?

## ಕಾಲ್ಪನಿಕ ವೇತನ ಬಡ್ತಿ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೭೦ (೧೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಶಾಲೆಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಶ್ರೀ ಬಸವರಾಜ ಹೊರಟ್ಟಿ ನೇತೃತ್ವದ ಸಮಿತಿಯು ಕೊಟ್ಟಿರುವ ವರದಿ ಸರ್ಕಾರದ ಗಮನದಲ್ಲಿ ಇದೆಯೇ;

(ಇ) ಮೇಲ್ಕಂಡ ವರದಿ ಅನುಸಾರ ಕಾಲ್ಪನಿಕ ವೇತನ ಬಡ್ತಿ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಸಕಾಲ ಯೋಜನೆ ಜಾರಿ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೭೧ (೧೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವಿಮಾ ಇಲಾಖೆಯಲ್ಲಿ ಸಕಾಲ ಯೋಜನೆ ಜಾರಿಯಲ್ಲಿದೆಯೇ;

(ಆ) ಇದ್ದಲ್ಲಿ, ಕಳೆದ ೩ ವರ್ಷಗಳಿಂದ ಸಕಾಲ ಯೋಜನೆಯಡಿ ವಿಲೇವಾರಿಯಾದ ಕಡತಗಳ ಸಂಖ್ಯೆ ಎಷ್ಟು ; ಹಾಗೂ ಈ ಕಡತಗಳಲ್ಲಿ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟ ಕಡತಗಳು ಎಷ್ಟು; ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ?

## ಖಾಸಗಿ ಐ.ಟಿ.ಐ. ಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೭೨ (೧೫೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಖಾಸಗಿ ಐ.ಟಿ.ಐ.ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ಐ.ಟಿ.ಐ ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಇ) ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲಾಗುವುದು ?

## ಸರ್ಕಾರಿ ಪ್ರೌಢ ಶಾಲಾ ಸಹಶಿಕ್ಷಕರಿಗೆ ಬಡ್ತಿ ನೀಡುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೭೩ (೧೫೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಅರ್ಹ ಸಹಶಿಕ್ಷಕರುಗಳಿಗೆ ಪದವಿಪೂರ್ವ ಕಾಲೇಜಿನ ಉಪನ್ಯಾಸಕರಾಗಿ ಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಆ) ಇಂತಹ ಅರ್ಹ ಸಹಶಿಕ್ಷಕರುಗಳಿಗೆ ಯಾವ ಕಾಲಮಿತಿಯೊಳಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಾಗಿ ಬಡ್ತಿ ನೀಡಲಾಗುವುದು ?

## ಕೌಶಲ್ಯಾಭಿವೃದ್ಧಿ ಯೋಜನೆಯ ಮುಖಾಂತರ ನಿರುದ್ಯೋಗಿಗಳನ್ನು ಉದ್ಯೋಗಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೪ (೧೦೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ನಿರುದ್ಯೋಗಿಗಳನ್ನು ಉದ್ಯೋಗಿಗಳನ್ನಾಗಿ ಮಾಡಲು ಜಾರಿಗೆ ತಂದ ಕೌಶಲ್ಯಾಭಿವೃದ್ಧಿ ಯೋಜನೆಗಳಾವುವು ;

(ಆ) ಎಷ್ಟು ಜನ ನಿರುದ್ಯೋಗಿಗಳಿಗೆ ತರಬೇತಿ ನೀಡಲಾಗಿದೆ ;

(ಇ) ಕೌಶಲ್ಯಾಭಿವೃದ್ಧಿ ಯೋಜನೆಗಳಿಂದ ಎಷ್ಟು ಜನ ನಿರುದ್ಯೋಗಿಗಳು ಉದ್ಯೋಗವನ್ನು ಪಡೆದಿದ್ದಾರೆ ? (ವಿವರ ನೀಡುವುದು)

## ವಿಶ್ವ ಆರೋಗ್ಯ ಸಂಸ್ಥೆಯನ್ವಯ ಆಸ್ಪತ್ರೆಗಳಲ್ಲಿ ಹಾಗೂ ಜನಸಂಖ್ಯೆ ಹಾಸಿಗೆಗಳ ಸೌಕರ್ಯದ ಬಗ್ಗೆ

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫ (೧೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಆಸ್ಪತ್ರೆಗಳಲ್ಲಿ ಜನಸಂಖ್ಯೆ ಮತ್ತು ಹಾಸಿಗೆಗಳ ಅನುಪಾತವೆಷ್ಟು ;

(ಆ) ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಸರಾಸರಿ ಎಷ್ಟು ಜನರಿಗೆ ಸುವ್ಯವಸ್ಥಿತ ಹಾಸಿಗೆ ವ್ಯವಸ್ಥೆ ಇರಬೇಕು ;

(ಇ) ಈ ಅಸಮಾನ ಅನುಪಾತವನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬ (೧೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಮೊದಲು ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ರಾಷ್ಟ್ರೀಯ ಶಿಕ್ಷಣ ನೀತಿ ಈಗಾಗಲೇ ಶಾಲೆಯಲ್ಲಿ ಓದುತ್ತಿರುವ ೧–೫ನೇ ತರಗತಿ ಮತ್ತು ೮ನೇ ತರಗತಿಯ ಮಕ್ಕಳಿಗೆ ಅನ್ವಯವಾಗುತ್ತಿದೆಯೇ ;

(ಇ) ರಾಷ್ಟ್ರೀಯ ಶಿಕ್ಷಣ ನೀತಿಗೆ ಅನ್ವಯಿಸುವಂತೆ ಗುಣಮಟ್ಟದ ಶಿಕ್ಷಣವನ್ನು ನೀಡಲು ಶಿಕ್ಷಕರಿಗೆ ತರಬೇತಿ ನೀಡುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಿಳಾ ಕಾರ್ಮಿಕರಿಗೆ ವನಿತಾ ಸಂಗಾತಿ ಯೋಜನೆಯಡಿ ಮಾಸಿಕ ಬಸ್ ಪಾಸ್ ವಿತರಣೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭ (೧೨೮) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦-೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಲಕ್ಷ ಮಹಿಳಾ ಕಾರ್ಮಿಕರಿಗೆ "ವನಿತಾ ಸಂಗಾತಿ" ಯೋಜನೆಯಡಿ ಮಾಸಿಕ ಬಸ್ ಪಾಸ್‌ಗಳನ್ನು ಕಾರ್ಖಾನೆಯ ಮಾಲೀಕರು ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಹಯೋಗದೊಂದಿಗೆ ಒದಗಿಸಲು ಉದ್ದೇಶಿಸಿದ್ದು, ಇದನ್ನು ಜಾರಿಗೊಳಿಸಲಾಗಿದೆಯೇ ;

(ಆ) ಜಾರಿಗೊಳಿಸಿದ್ದಲ್ಲಿ, ಎಷ್ಟು ಜನ ಮಹಿಳಾ ಕಾರ್ಮಿಕರು ಇದರ ಪ್ರಯೋಜನ ಪಡೆದಿದ್ದಾರೆ ;

(ಇ) ಈ ಯೋಜನೆ ಇನ್ನು ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು ; ವಿಳಂಬಕ್ಕೆ ಕಾರಣಗಳೇನು ?

## ಶಿಕ್ಷಣ ಇಲಾಖೆಯಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೮ (೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅತಿಥಿ ಶಿಕ್ಷಕರು, ಉಪನ್ಯಾಸಕರು ಸಾವಿರಾರು ಸಂಖ್ಯೆಯಲ್ಲಿ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಸರ್ಕಾರಿ ಅನುದಾನಿತ, ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಶಿಕ್ಷಣ ಇಲಾಖೆಯಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಪರಿಶಿಷ್ಟ ಜಾತಿಯವರಿಗೆ ಅನುದಾನ ನೀಡುವ ಗುರಿಯನ್ನು ಹೊಂದಿದೆಯೇ ; ಹೊಂದಿದ್ದಲ್ಲಿ, ಅದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು ? (ವಿವರ ನೀಡುವುದು)

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ಪ್ರಸ್ತುತ ಕಾಮಗಾರಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯ (೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ನಿರ್ವಹಣೆಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ; ಇದಕ್ಕೆ ನಡೆಸಿದ ಟೆಂಡರ್ ಪ್ರಕ್ರಿಯೆಯ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಾಮಗಾರಿ ಗುತ್ತಿಗೆ ಪಡೆದ ಗುತ್ತಿಗೆದಾರರು ಸಂಸ್ಥೆಗೆ ಮರು ಗುತ್ತಿಗೆ ನೀಡಲು ಸರ್ಕಾರದಲ್ಲಿ ಅವಕಾಶ ಕಲ್ಪಿಸಲಾಗಿದೆಯೇ ; ಇದ್ದಲ್ಲಿ, ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು ;

(ಈ) ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಕಾಲಮಿತಿಯೇನು; ಕಾಮಗಾರಿ ವಿಳಂಬದಿಂದ ಸರ್ಕಾರಕ್ಕೆ ಆಗಿರುವ ನಷ್ಟವೇನು ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೮೦ (೩೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಇದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಇ) ವಿಜಯ;ಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಕಾರ್ಮಿಕ ಇಲಾಖೆಯಿಂದ ಆಟೋ ಚಾಲಕರಿಗೆ ಮತ್ತು ಇತರರಿಗೆ ನೀಡಿರುವ ಹಣದ ಬಗ್ಗೆ

**ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೮೧ (೩೪) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರೋನ ವೈರಸ್ ಪ್ರಾರಂಭವಾದ ಸಮಯದಿಂದ ಇದುವರೆಗೂ ಕಾರ್ಮಿಕ ಇಲಾಖೆಯಿಂದ ಆಟೋ ಚಾಲಕರುಗಳಿಗೆ ಮತ್ತು ಇತರರಿಗೆ ನೀಡಿರುವ ಹಣ ಎಷ್ಟು ; ಎಷ್ಟು ಅರ್ಜಿಗಳು ಬಂದಿವೆ; ಎಷ್ಟು ಬಾಕಿ ಇದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಾರ್ಮಿಕ ಇಲಾಖೆಯಿಂದ ಯಾವ ಯಾವ ಯೋಜನೆಗಳಿಗೆ ಧನ ಸಹಾಯ ಮಾಡಲಾಗಿದೆ ; (ವಿವರ ನೀಡುವುದು)

(ಇ) ಅಸಂಘಟಿತ ಕಾರ್ಮಿಕರಿಗೆ ಜಾರಿಗೆ ತಂದಿರುವ ಪಿಂಚಣಿ ಯೋಜನೆ ಜಾರಿಯಲ್ಲಿದೆಯೇ ; ಅಸಂಘಟಿತ ಸಾರಿಗೆ ನೌಕರರಿಗೆ ಈ ಯೋಜನೆ ಅನ್ವಯಿಸುವುದಿಲ್ಲವೇ ; ಪಿಂಚಣಿ ಯೋಜನೆ ಅನ್ವಯ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨ (೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯಡಿಯಲ್ಲಿ ನೋಂದಾವಣಿಯಾಗಿರುವ ಆಸ್ಪತ್ರೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ವಿಳಂಬವಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ;

(ಉ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ರಸ್ತೆಗಳ ಅಗಲೀಕರಣಕ್ಕೆ ಕಡಿತ ಮಾಡಿದ ಮರಗಳ ಕುರಿತು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩ (೫೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಸ್ತೆಗಳ ಅಗಲೀಕರಣಕ್ಕೆ ಕಡಿದ ಮರಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ರಸ್ತೆಗಳ ಅಗಲೀಕರಣ ಮುಗಿದ ನಂತರ ರಸ್ತೆ ಬದಿಯಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಒಟ್ಟು ಅರಣ್ಯ ಪ್ರದೇಶವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಸರ್ವೆ ನಂ. ವಿಸ್ತೀರ್ಣದ ವಿವರ ನೀಡುವುದು)

(ಈ) ಹಲವಾರು ವರ್ಷಗಳಿಂದ ಒತ್ತುವರಿ ಅರಣ್ಯ ಭೂಮಿಯನ್ನೇ ನಂಬಿ ಜೀವನ ಸಾಗಿಸುವ ಬಡ ಕುಟುಂಬಗಳಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ ?

## ರಾಜ್ಯದಲ್ಲಿ ಚಿರತೆ, ಹುಲಿ, ಆನೆ ಮಾನವರ ಮೇಲೆ ದಾಳಿ ಮಾಡಿರುವ ಪ್ರಕರಣದ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪ (೫೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಚಿರತೆ, ಹುಲಿ, ಆನೆ ಮಾನವರ ಮೇಲೆ ದಾಳಿ ವಾಡಿರುವ ಪ್ರಕರಣಗಳೆಷ್ಟು ; ಇದರಲ್ಲಿ ಎಷ್ಟು ಜನ ಮೃತಪಟ್ಟಿರುತ್ತಾರೆ ; ಮೃತ ಪಟ್ಟಿರುವವರಿಗೆ ಪರಿಹಾರವಾಗಿ ಎಷ್ಟು ಹಣವನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ವನ್ಯ ಜೀವಿಗಳು ಮಾನವನ ಮೇಲೆ ದಾಳಿ ಮಾಡುವುದು ಮತ್ತು ಹಳ್ಳಿಗಳಲ್ಲಿ ಕಾಣಿಸಿಕೊಳ್ಳಲು ಕಾರಣಗಳೇನು;

(ಇ) ಈ ರೀತಿ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕೋವಿಡ–೧೯ಕ್ಕೆ ಬಲಿಯಾಗಿರುವವರ ಕುರಿತು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫ (೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೋವಿಡ್–೧೯ಗೆ ಬಲಿಯಾಗಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈಗಾಗಲೇ ಕೋವಿಡ್–೧೯ ಕಾಯಿಲೆಗೆ ಗುರಿಯಾಗಿರುವವರ ಸಂಖ್ಯೆ ಎಷ್ಟು ; (ಕಾಯಿಲೆಯಿಂದ ಗುಣಮುಖರಾದವರ ಜಿಲ್ಲಾವಾರು ವಿವರ ನೀಡುವುದು) ;

(ಇ) ಖಾಸಗಿ ಆಸ್ಪತ್ರೆಗಳಲ್ಲಿ ಕರೋನ ರೋಗಕ್ಕೆ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ ಎಷ್ಟು ; (ಆಸ್ಪತ್ರೆಗಳ ಹೆಸರು ಮತ್ತು ವೈದ್ಯರು, ಸಿಬ್ಬಂದಿಗಳ ಜಿಲ್ಲಾವಾರು ವಿವರ ನೀಡುವುದು)

(ಈ) ಕೋವಿಡ್–೧೯ ನಿಯಂತ್ರಣ ಮತ್ತು ನಿರ್ವಹಣೆಗೆ ನೇಮಿಸಿದ ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿಗಳ ಜಿಲ್ಲಾವಾರು ವಿವರ ನೀಡುವುದು ;

(ಉ) ಕೋವಿಡ್–೧೯ ಸಂಬಂಧ ಖರೀದಿ ಮಾಡಿರುವ ವೆಂಟಿಲೇಟರ್‌ಗಳ ಸಂಖ್ಯೆ ಎಷ್ಟು ; ಯಾವ ಕಂಪನಿಗಳಿಂದ ಖರೀದಿ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

'(ಊ) ಕೋವಿಡ್-೧೯ಗೆ ಖರೀದಿ ಮಾಡಿರುವ ಮಾಸ್ಕ್ ಮತ್ತು ಪಿ.ಪಿ.ಕಿಟ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಋ) ಕರೋನ ರೋಗಕ್ಕೆ ತುತ್ತಾಗಿರುವ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿರುವ ಔಷಧಗಳ ವಿವರ ನೀಡುವುದು ?

## ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಉಚಿತ ಡಯಾಲಿಸೀಸ್ ಕುರಿತು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೬ (೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿ ಉಚಿತವಾಗಿ ಡಯಾಲಿಸೀಸ್ ಮಾಡುವ ಯಂತ್ರವಿದೆಯೇ ;

(ಆ) ರಾಜ್ಯದ ಖಾಸಗಿ ಆಸ್ಪತ್ರೆಯಲ್ಲಿ ಬಡವರಿಗೆ ಡಯಾಲಿಸೀಸ್ ಮಾಡಲು ದುಪ್ಪಟ್ಟು ದರ ನಿಗದಿಯಿಂದ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಆಸ್ಪತ್ರೆಗಳಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆ ಇದೆಯೇ ; ಸದರಿ ಆಸ್ಪತ್ರೆಗಳಿಗೆ ಮಂಜೂರಾದ ವೈದ್ಯರು ಮತ್ತು ನರ್ಸ್‌ಗಳು ಹಾಗೂ ಇತರೆ ಖಾಲಿ ಇರುವ ಸಿಬ್ಬಂದಿಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಉಚಿತ ಆರೋಗ್ಯ ಯೋಜನೆಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೭ (೧೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗಾಗಿ ಜಾರಿಯಲ್ಲಿರುವ ಉಚಿತ ಆರೋಗ್ಯ ಯೋಜನೆಗಳಾವುವು ;(ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಉಚಿತ ಆರೋಗ್ಯ ಯೋಜನೆಗಳನ್ನು ಬೀದರ್ ಜಿಲ್ಲೆಯಲ್ಲಿ ಅಳವಡಿಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಇ) ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ಯೋಜನೆಗಳನ್ನು ಯಾವ ಮಾನದಂಡವನ್ನು ಅನುಸರಿಸಿ ನೀಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಈ) ಉಚಿತ ಆರೋಗ್ಯ ಯೋಜನೆಯನ್ನು ಪಡೆದು ಆರೋಗ್ಯ ಕಾರ್ಡ್ ಪಡೆಯಲು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಿಶ್ವವಿದ್ಯಾಲಯಗಳಲ್ಲಿ ನಡೆದಿರುವ ಅಕ್ರಮಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೮ (೧೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಅಕ್ರಮ ನೇಮಕಾತಿ ಭ್ರಷ್ಟಾಚಾರ ಮತ್ತು ನಕಲಿ ಅಂಕಪಟ್ಟಿ ಪ್ರಕರಣಗಳು ಪತ್ತೆಯಾಗಿವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರು ಯಾರ್‍ಯಾರು ; (ವಿಶ್ವವಿದ್ಯಾಲಯಗಳವಾರು ಮಾಹಿತಿ ಒದಗಿಸುವುದು)

(ಇ) ನಕಲಿ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರವು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ವಿರುದ್ಧ ಯಾವ ಯಾವ ಶಿಸ್ತಿನ ಕ್ರಮಗಳನ್ನು ಹಾಗೂ ಯಾರ ಯಾರ ಮೇಲೆ ಮೊಕದ್ದಮೆಗಳನ್ನು ದಾಖಲಿಸಿದೆ ; (ವಿವರ ನೀಡುವುದು)

(ಈ) ರಾಜ್ಯದ ವಿಶ್ವವಿದ್ಯಾಲಯಗಳನ್ನು ಭ್ರಷ್ಟಾಚಾರ ಮುಕ್ತ ಮತ್ತು ಪಾರದರ್ಶಕ ಆಡಳಿತ ನಡೆಸುವಂತೆ ಮಾಡಲು ಸಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ರಾಜ್ಯದಲ್ಲಿ ಸರ್ಕಾರದ ಅನುಮತಿಯನ್ನು ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಪ್ಲೇ–ಸ್ಕೂಲ್‌ಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೮೯ (೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅನುಮತಿಯನ್ನು ಪಡೆಯದೆ ಪ್ಲೇ–ಸ್ಕೂಲ್‌ಗಳು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅವುಗಳನ್ನು ನಿಯಂತ್ರಿಸಲು ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಸರ್ಕಾರದ ಅನುಮತಿಯನ್ನು ಪಡೆದು ಎಷ್ಟು ಪ್ಲೇ–ಸ್ಕೂಲ್‌ಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಪ್ಲೇ–ಸ್ಕೂಲ್‌ಗಳ ಜೊತೆಯಲ್ಲಿ ಖಾಸಗಿ ಟ್ಯೂಶನ್ ಕೇಂದ್ರಗಳು (ಮನೆ ಪಾಠ) ಹೆಚ್ಚಿನ ಶುಲ್ಕವನ್ನು ಪಡೆದು ಕಾರ್ಯನಿರ್ವಹಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಅವುಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಅಭಯಾರಣ್ಯಗಳಲ್ಲಿ ಬೆಂಕಿ ಕಾಣೀಸಿಕೊಂಡಾಗ ಸರ್ಕಾರ ಕೈಗೊಳ್ಳುವ ಕ್ರಮಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೦ (೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದೆರಡು ವರ್ಷಗಳಿಂದ ಕರ್ನಾಟಕದ ಪ್ರಸಿದ್ಧ ಅಭಯಾರಣ್ಯಗಳು ಹಾಗೂ ಹುಲಿ ಸಂರಕ್ಷಿತ ಅರಣ್ಯಗಳೂ ಆದ ಬಂಡೀಪುರ, ನಾಗರಹೊಳೆ ಹಾಗೂ ಗೋಪಾಲಸ್ವಾಮಿ ಬೆಟ್ಟದಲ್ಲಿ ಬೇಸಿಗೆಯಲ್ಲಿ ಬೆಂಕಿ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಈ ಬಾರಿ ಬೆಂಕಿ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಆ) ಪಶ್ಚಿಮಘಟ್ಟಗಳು ಹಾದು ಹೋಗುವ ಅರಣ್ಯ, ಕಪ್ಪತಗುಡ್ಡ ಸೇರಿದಂತೆ ಕರ್ನಾಟಕದ ವಿವಿಧ ಅರಣ್ಯ ಪ್ರದೇಶಗಳಲ್ಲಿ ಪ್ರತಿ ವರ್ಷ ಬೆಂಕಿ ಕಾಣಿಸಿಕೊಳ್ಳುತ್ತಿದ್ದು, ಇವುಗಳ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಕಾಡಿನ ಬೆಂಕಿ ನಿಯಂತ್ರಿಸಲು ಸಿಬ್ಬಂದಿಗಳಿಗೆ ಸೂಕ್ತ ತರಬೇತಿ ನೀಡಲಾಗಿದೆಯೇ ; ಅರಣ್ಯ ಇಲಾಖೆಯಲ್ಲಿ ಇನ್ನೂ ಭರ್ತಿಯಾಗಬೇಕಿರುವ ಫಾರೆಸ್ಟ್ ಗಾರ್ಡ್, ವಾಚರ್ಸ್ ಹುದ್ದೆಗಳ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಕೊರೋನ ವೈರಸ್ ರೋಗವನ್ನು ನಿಯಂತ್ರಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೧ (೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೊರೋನ ವೈರಸ್ ರೋಗವನ್ನು ನಿಯಂತ್ರಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ; ಮತ್ತು ಯಾವ ಯಾವ ಆಸ್ಪತ್ರೆಗಳಲ್ಲಿ ಎಷ್ಟೆಷ್ಟು ಬೆಡ್‌ಗಳನ್ನು ಮೀಸಲು ಇಟ್ಟಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕೊರೋನ ವೈರಸ್ ರೋಗವನ್ನು ನಿಯಂತ್ರಣ ಮಾಡಲು ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು ; ಎಷ್ಟು ಹಣ ಖರ್ಚಾಗಿದೆ ; (ವಿವರ ನೀಡುವುದು)

(ಇ) ಕೊರೋನ ವೈರಸ್ ರೋಗವು ರಾಜ್ಯದಲ್ಲಿ ಕಾಣಿಸಿಕೊಂಡಾಗಿನಿಂದ ಎಷ್ಟು ಆಂಬುಲೆನ್ಸ್‌ಗಳನ್ನು ಖರೀದಿ ಮಾಡಲಾಗಿದೆ ; ಪ್ರಸ್ತುತ ಬೆಂಗಳೂರು ನಗರದಲ್ಲಿ ಎಷ್ಟು ಆಂಬುಲೆನ್ಸ್‌ಗಳು ಕಾರ್ಯನಿರ್ವಹಿಸುತ್ತಿವೆ ? (ಸಂಪೂರ್ಣ ವಿವರ ನೀಡುವುದು)

## ಕಾರ್ಮಿಕರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಣೆ ಮಾಡಿದ ಸಹಾಯ ಧನ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೨ (೨೫) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕರಿಗೆ ಸರ್ಕಾರ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಣೆ ಮಾಡಿದ ಸಹಾಯ ಧನವು ಇನ್ನೂ ಕೆಲವು ಕಾರ್ಮಿಕರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ಯಾವಾಗ ತಲುಪಿಸಲಾಗುತ್ತದೆ ;

(ಆ) ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಲಾಕ್‌ಡೌನ್ ಸಂದರ್ಭದಲ್ಲಿ ನೀಡಿದ ಕಾರ್ಮಿಕ ಕಿಟ್‌ಗಳ ಸಂಖ್ಯೆ ಎಷ್ಟು ; ಇದಕ್ಕಾಗಿ ಸರ್ಕಾರ ಎಷ್ಟು ಹಣ ವೆಚ್ಚ ಮಾಡಿದೆ ; (ವಿವರ ನೀಡುವುದು)

(ಇ) ಕಾರ್ಮಿಕ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು ; ಖರ್ಚಾದ ಹಣ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಕೂಲಿ ಮತ್ತು ಇತರೆ ಕಾರ್ಮಿಕ ಕುಟುಂಬಗಳ ವಲಸೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೩ (೯೧) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಕೊರೋನ ಮಹಾಮಾರಿ ರೋಗದ ಹಿನ್ನಲೆಯಲ್ಲಿ ರಾಜ್ಯದಲ್ಲಿ ಅದರಲ್ಲೂ ನಗರ ಪ್ರದೇಶಗಳಿಂದ ಹಲವು ಕೂಲಿ

ಮತ್ತು ಇತರೆ ಕಾರ್ಮಿಕ ಕುಟುಂಬಗಳು ತಮ್ಮ ಸ್ವಂತ ಊರುಗಳಿಗೆ, ರಾಜ್ಯಗಳಿಗೆ ವಾಪಸ್ ಹೋಗಿರುವ/ಹೋಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಪ್ರಕ್ರಿಯೆಯನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ವಾಪಸ್ ಹೋಗಿರುವ ಸದರಿ ಕುಟುಂಬಗಳನ್ನು ಮರಳಿ ಬರುವಂತೆ ಮಾಡಲು ಸರ್ಕಾರ ಯಾವುದಾದರೂ ಪೂರಕ ಯೋಜನೆಗಳ ಕುರಿತು ಚಿಂತಿಸಿದೆಯೇ ; (ವಿವರ ನೀಡುವುದು)

(ಈ) ಮಹಾಮಾರಿ ಹಿನ್ನಲೆಯಲ್ಲಿ ರಾಜ್ಯದಲ್ಲಿ ಹಲವಾರು ಸಣ್ಣ ಕಾರ್ಖಾನೆಗಳು (Factory) ಬಾಗಿಲು ಮುಚ್ಚಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಕಾರ್ಖಾನೆಗಳು ಬಾಗಿಲು ಮುಚ್ಚಿವೆ ಮತ್ತು ಎಷ್ಟು ಸಂಖ್ಯೆಯ ನೌಕರರು ಬೀದಿ ಪಾಲಾಗಿದ್ದಾರೆ ; (ಮಾಹಿತಿ ನೀಡುವುದು)

(ಉ) ಈ ಬೀದಿ ಪಾಲಾಗಿರುವ ಕಾರ್ಮಿಕರ ಮತ್ತು ಅವರ ಅವಲಂಭಿತ ಕುಟುಂಬಗಳ ಮುಂದಿನ ಜೀವನೋಪಾಯ ವಿಷಯದ ಬಗ್ಗೆ ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ಶಾಲೆಗಳಲ್ಲಿ ONLINE ಶಿಕ್ಷಣದ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೪ (೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಕರೋನ ಮಹಾಮಾರಿ ರೋಗದ ಹಿನ್ನಲೆಯಲ್ಲಿ ಹಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಶಾಲಾ ಮಕ್ಕಳಿಗೆ

ಅಂತರ್ಜಾಲ (Online Teaching) ಶಿಕ್ಷಣ ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ನೂತನ ಮಾದರಿಯ ಶಿಕ್ಷಣದ ಕುರಿತು ಸರ್ಕಾರದ ಅಭಿಪ್ರಾಯವೇನು ; ಮತ್ತು ಸಣ್ಣ ಮಕ್ಕಳ ಮೇಲೆ ಆಗುವ ಪರಿಣಾಮಗಳ ಕುರಿತು ಸರ್ಕಾರ ಚಿಂತಿಸಿದೆಯೇ ; (ವಿವರ ನೀಡುವುದು)

(ಇ) ಪ್ರಸ್ತುತ ವರ್ಷದ ಶಾಲೆಯ ವಾರ್ಷಿಕ/ಮಾಸಿಕ ಶುಲ್ಕ (Fees) ಅಂತರ್ಜಾಲದ ಮೂಲಕ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಕಟ್ಟಲು ಕೋವಿಡ್ ಸಂಕಷ್ಟದಲ್ಲಿರುವ ಸಾರ್ವಜನಿಕರನ್ನು ಪೀಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಶುಲ್ಕ ಕಡಿಮೆ ಮಾಡಲು ಖಾಸಗಿ ಶಾಲೆಗಳಿಗೆ ಸರ್ಕಾರದ ವತಿಯಿಂದ ಯಾವುದಾದರೂ ಮಾರ್ಗದರ್ಶನ ನೀಡಲಾಗಿದೆಯೇ ? (ವಿವರ ನೀಡುವುದು)

**ಕೌಶಲ್ಯಾಭಿವೃದ್ಧಿ ಇಲಾಖೆ ವತಿಯಿಂದ ತರಬೇತಿ ನೀಡಿರುವ ಕುರಿತು**

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೫ (೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ನಿರುದ್ಯೋಗ ನಿವಾರಣೆ ಸಲುವಾಗಿ ನೀಡಿರುವ ಆರ್ಥಿಕ ನೆರವು ಹಾಗೂ ಕಾರ್ಯಕ್ರಮಗಳು ಮತ್ತು ಯೋಜನೆಗಳ ವರ್ಷವಾರು ಮಾಹಿತಿ ನೀಡುವುದು ;

(ಆ) ಕಳೆದ ೫ ವರ್ಷಗಳಲ್ಲಿ ಇಲಾಖೆ ವತಿಯಿಂದ ಆಯೋಜಿಸಿರುವ ತರಬೇತಿಯನ್ನು ಪಡೆದವರ ಸಂಖ್ಯೆ ಮತ್ತು ವೆಚ್ಚದ ಕುರಿತು ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು ;

(ಇ) ಇಲಾಖೆ ವತಿಯಿಂದ ತರಬೇತಿ ಪಡೆದ ಎಷ್ಟು ಜನರಿಗೆ ಖಾಸಗಿ/ ಸರ್ಕಾರಿ ಉದ್ಯೋಗ ಲಭಿಸಿದೆ ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಈ) ಇಲಾಖೆ ವತಿಯಿಂದ ತರಬೇತಿ ಪಡೆದ ಎಷ್ಟು ಜನರಿಗೆ ಸ್ವ-ಉದ್ಯೋಗ ಮಾಡಲು ಬ್ಯಾಂಕ್ ಮತ್ತು ಇತರೆ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಸೌಲಭ್ಯವನ್ನು ಪಡೆಯಲು ಇಲಾಖೆ ಸಹಾಯ ಮಾಡಿದೆ ? (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

## ಚಿತ್ರದುರ್ಗ ದಾವಣಗೆರೆ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೯೬ (೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೊಸದಾಗಿ ನಿರ್ಮಾಣ ಮಾಡಬೇಕಿರುವ ಕೊಠಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಎರಡೂ ಜಿಲ್ಲೆಗಳಲ್ಲಿ ಹೊಸ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಕೋವಿಡ್‌–೧೯ ಆಸ್ಪತ್ರೆಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೭ (೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕೋವಿಡ್‌–೧೯ ನಿರ್ವಹಣೆಗಾಗಿ ಹೊಸದಾಗಿ ತೆರೆಯಲಾಗಿರುವ ಕೋವಿಡ್ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೋವಿಡ್‌–೧೯ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಇದರಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ರಾಜ್ಯದ ವಿವಿಧೆಡೆ ಕೋವಿಡ್‌–೧೯ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ ಸಂಬಳ ನೀಡುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ ಅರಣ್ಯ ಪ್ರವಾಸಿ ಮಂದಿರಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೮ (೯೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗದ ಜೋಗಿಮಟ್ಟಿಯಲ್ಲಿರುವ ಆಡುಮಲ್ಲೇಶ್ವರ ಮೃಗಾಲಯ ಅಭಿವೃದ್ಧಿಗೆ ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿರುವ ಅರಣ್ಯ ಇಲಾಖೆ ಪ್ರವಾಸಿ ಮಂದಿರಗಳ ಸಂಖ್ಯೆ ಎಷ್ಟು ; ಇದರಲ್ಲು ಪ್ರವಾಸಿಗರಿಗೆ ನೀಡಲಾಗುತ್ತಿರುವ ಪ್ರವಾಸಿ ಮಂದಿರಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಪ್ರವಾಸಿ ಮಂದಿರಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕಳೆದ ೨ ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಹಾಗೂ ಅದಕ್ಕೆ ತಗುಲಿದ ವೆಚ್ಚ ಎಷ್ಟು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೯ (೯೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಪ್ರಸ್ತಾವ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ವಿಳಂಬ ಆಗುತ್ತಿರುವ ಕಾರಣವೇನು ? (ಮಾಹಿತಿ ಒದಗಿಸುವುದು)

## ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೦ (೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ ಅಂಶ ಒದಗಿಸುವುದು) ಅವುಗಳಿಗೆ ಸಮರ್ಪಕವಾಗಿ ಪುಸ್ತಕಗಳನ್ನು ಒದಗಿಸಲಾಗುತ್ತಿದೆಯೇ ; (ಮಾಹಿತಿ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಶಿಕ್ಷಣ ಇಲಾಖೆಯ ಗ್ರಂಥಾಲಯಗಳಿಗೆ ಪುಸ್ತಕ ಖರೀದಿ ಮಾಡಲು ಬಳಸಲಾದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯಗಳಿಗೆ ೨೦೨೦–೨೦೨೧ನೇ ಸಾಲಿಗೆ ಪುಸ್ತಕ ಖರೀದಿಸಲು ಮೀಸಲಿಡಲಾದ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಕೋವಿಡ್–೧೯ರ ಬಗ್ಗೆ ಸಮರ್ಪಕ ವೈದ್ಯಕೀಯ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೧ (೧೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್-೧೯ರ ರೋಗಿಗಳಿಗೆ ಸಮರ್ಪಕ ವೈದ್ಯಕೀಯ ಸೇವೆಯನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಗಳನ್ನು ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕು ಕೋವಿಡ್ ಕೇರ್ ಸೆಂಟರ್‌ಗಳಿಗೆ ಅರೆ ವೈದ್ಯಕೀಯ ಸಿಬ್ಬಂದಿಗಳಾದ ಶುಶ್ರೂಷಕರು, ಲ್ಯಾಬ್ ಟೆಕ್ನಿಷಿಯನ್ಸ್, ಫಾರ್ಮಾಸಿಸ್ಟ್, ಗ್ರೂಪ್-ಡಿ ಹುದ್ದೆಗಳನ್ನು ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆಯೇ ; ಭರ್ತಿ ಮಾಡಿದ್ದಲ್ಲಿ, ಜಿಲ್ಲಾ ಮತ್ತು ತಾಲ್ಲೂಕುಗಳ ಕೋವಿಡ್ ಕೇರ್ ಸೆಂಟರ್‌ವಾರು ವಿವರಗಳನ್ನು ನೀಡುವುದು ;

(ಇ) ತಾಲ್ಲೂಕುವಾರು ಕೋವಿಡ್-೧೯ ರೆಫರೆಲ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಿರುವ ಪಾಸಿಟಿವ್ ಸೋಂಕಿತರ ವಿವರ ಮತ್ತು ಸೋಂಕಿತರಿಗೆ ಸರ್ಕಾರ ಭರಿಸುತ್ತಿರುವ ವೆಚ್ಚದ ವಿವರಗಳನ್ನು ನೀಡುವುದು ;

(ಈ) ಖಾಸಗಿ ಆಸ್ಪತ್ರೆಗಳು ಪ್ರಭಾವಿ ವ್ಯಕ್ತಿಗಳಿಗೆ ಮಾತ್ರ ಚಿಕಿತ್ಸೆ ನೀಡುತ್ತಿದ್ದು, ಹಲವು ಪ್ರಕರಣಗಳಲ್ಲಿ ಚಿಕಿತ್ಸೆ ನೀಡದೆ ಸಾವು ಸಂಭವಿಸಲು ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಪ್ರಮಾಣಿಕ ಕಾರ್ಯಾಚರಣೆ ವಿಧಾನಗಳು, ಸಕ್ಷಮ ಪ್ರಾಧಿಕಾರಗಳ ಮಾರ್ಗಸೂಚಿಗಳು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಐಪಿಸಿ, ಸಾಂಕ್ರಾಮಿಕ ರೋಗ ಕಾಯ್ದೆಗಳನ್ವಯ ಇಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಜಿಲ್ಲಾವಾರು ವಿವರಗಳನ್ನು ನೀಡುವುದು ;

(ಉ) ಕೋವಿಡ್ ಸೋಂಕಿತರು ಮರಣ ಸಂಭವಿಸಿದಾಗ, ಮೃತರ ಅಂತ್ಯಕ್ರಿಯೆಯ ವೆಚ್ಚವನ್ನು ಯಾವ ಸಕ್ಷಮ ಪ್ರಾಧಿಕಾರ ಭರಿಸಬೇಕು ; ಪ್ರತಿ ಶವಸಂಸ್ಕಾರಕ್ಕೆ ಸರ್ಕಾರ ನಿಗದಿಪಡಿಸಿರುವ ವೆಚ್ಚದ ವಿವರ ನೀಡುವುದು ;

(ಊ) ರಾಜ್ಯಾದ್ಯಂತ ಸೋಂಕಿತರ ಚಿಕಿತ್ಸೆಗೆಂದು ಸರ್ಕಾರ ಆಗಸ್ಟ್ ಅಂತ್ಯದವರೆಗೆ ಜ್ವರದ ಕ್ಲಿನಿಕ್‌ಗಳು, ಕ್ವಾರಂಟೈನ್ ಕೇಂದ್ರಗಳು, ಐಸೋಲೇಷನ್ ಕೇಂದ್ರಗಳು, ಕೋವಿಡ್ ನಿಗದಿತ ಆಸ್ಪತ್ರೆಗಳು ಸೇರಿ ಒಟ್ಟು ವೆಚ್ಚದ ಜಿಲ್ಲಾವಾರು ವಿವರಗಳನ್ನು ನೀಡುವುದು ;

(ಋ) ಸಂಪೂರ್ಣ ಅನ್‌ಲಾಕ್‌ನಿಂದಾಗಿ ಮುಂಬರುವ ದಿನಗಳಲ್ಲಿ ಸೋಂಕು ಹರಡುವಿಕೆಯನ್ನು ತಡೆಗಟ್ಟಲು ಸರ್ಕಾರ ಮುಂಜಾಗೃತಾ ಕ್ರಮವಾಗಿ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳು ಯಾವುವು ?

## YES ಕೇಂದ್ರಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೨ (೧೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ಇರುವ Yes ಕೇಂದ್ರಗಳು ಎಷ್ಟು ; ಅವುಗಳು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) Yes ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರು ಎಷ್ಟು ;

(ಇ) ಸದರಿಂಯುವರುಗಳಿಗೆ ಕಾಲಕಾಲಕ್ಕೆ ಸಂಬಳವನ್ನು ಪಾವತಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ; (ಮಾಹಿತಿ ನೀಡುವುದು)

(ಈ) ಇವರು ಹೊರಗುತ್ತಿಗೆ ನೌಕರರೇ ಅಥವಾ ಖಾಯಂ ಅಧಿಕಾರಿಗಳೇ ? (ವಿವರ ನೀಡುವುದು)

## ಲಾಕ್‌ಡೌನ್ ಸಂದರ್ಭದಲ್ಲಿ ಇಲಾಖೆ ನೀಡಿದ ಪರಿಹಾರಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೩ (೧೪೫) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ನಗರ ಪ್ರದೇಶಗಳಲ್ಲಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರು ಮತ್ತು ಅವರು ಕುಟುಂಬಸ್ಥರಿಗೆ ಆರೋಗ್ಯ ರಕ್ಷಣೆ ನೀಡುವ ದೃಷ್ಟಿಯಿಂದ ಎಷ್ಟು ; "ಮೊಬೈಲ್ ಕ್ಲಿನಿಕ್" ಗಳನ್ನು ಪ್ರಾರಂಭಿಸಲಾಗಿದೆ ;

(ಆ) ಪ್ರಾರಂಭಿಸಿದಲ್ಲಿ, ಇದುವರೆವಿಗೂ ಎಷ್ಟು ಜನ ಕಾರ್ಮಿಕರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ ;

(ಇ) ಈ ಯೋಜನೆಯನ್ನು ಇನ್ನು ಪ್ರಾರಂಭಿಸದೆ ಇದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ; ವಿಳಂಬಕ್ಕೆ ಕಾರಣಗಳೇನು ;

(ಈ) ವಲಸೆ ಕಾರ್ಮಿಕರ ಸಂಖ್ಯೆ ಎಷ್ಟು ; ಈ ವಲಸೆ ಕಾರ್ಮಿಕರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಯಾವ ಯಾವ ರೀತಿಯ ಕಿಟ್‌ಗಳನ್ನು ವಿತರಿಸಲಾಗಿದೆ ; ಇದಕ್ಕೆ ತಗುಲಿದ ವೆಚ್ಚವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕೋವಿಡ್–೧೯ರ ಪ್ರಯುಕ್ತ ಲಾಕ್‌ಡೌನ್ ಸಂದರ್ಭದಲ್ಲಿ ತಮ್ಮ ಇಲಾಖೆ ವತಿಯಿಂದ ವಿವಿಧ ವರ್ಗದವರಿಗೆ ವಿತರಿಸಲಾದ ಪರಿಹಾರಗಳೇನು ; ಅದಕ್ಕೆ ತಗುಲಿದ ವೆಚ್ಚಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕೋವಿಡ್–೧೯ರ ನಿರ್ವಹಣೆಯ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೪ (೧೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವ್ಯಾಪ್ತಿ ಕೋವಿಡ್–೧೯ ನಿರ್ವಹಣೆಯಲ್ಲಿ ಕೊರೋನ ವಾರಿಯರ್ಸ್ ಆಗಿ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ ;

(ಆ) ಅವರುಗಳಲ್ಲಿ ವೈದ್ಯರು, ದಾದಿಯರು, ಪೊಲೀಸ್ ಸಿಬ್ಬಂದಿಗಳು, ಅಟೆಂಡರ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಆಸ್ಪತ್ರೆವಾರು ವಿವರ ನೀಡುವುದು)

(ಇ) ಸದರಿ ವಾರಿಯರ್ಸ್‌ಗೆ ನೀಡುತ್ತಿರುವ ವೈದ್ಯಕೀಯ ಸೌಲಭ್ಯಗಳೇನು ; ಆರ್ಥಿಕ ಸೌಲಭ್ಯಗಳೇನು ; ಅವುಗಳಿಗೆ ಇಲ್ಲಿಯವರೆಗೆ ಮಾಡಿರುವ ವೆಚ್ಚವೆಷ್ಟು ; (ವಿವರಗಳನ್ನು ನೀಡುವುದು)

(ಈ) ವಾರಿಯರ್ಸ್ ಕರ್ತವ್ಯದ ಕಾಲಾವಧಿ ಏನು ; ಕರ್ತವ್ಯದ ಅವಧಿಯ ನಂತರ ಕ್ವಾರಂಟೈನ್‌ಗೆ ಒಳಪಡುತ್ತಿದ್ದಾರೆಯೇ ;

(ಉ) ಒಳಪಡುತ್ತಿದ್ದರೆ ಅದರ ಸೌಲಭ್ಯವನ್ನು ಬೆಂಗಳೂರು ಸೇರಿದಂತೆ ಯಾವ ಯಾವ ಭಾಗಗಳಲ್ಲಿ ಮಾಡಿಕೊಡಲಾಗಿದೆ ; (ವಿವರಗಳನ್ನು ನೀಡುವುದು)

(ಊ) ಇದಕ್ಕೆ ಇಲ್ಲಿಯವರೆಗೆ ಮಾಡಿರುವ ವೆಚ್ಚವೆಷ್ಟು ? (ವಿವರಗಳನ್ನು ನೀಡುವುದು)

## ೦೧–೦೮–೨೦೦೮ರ ನಂತರ ನೇಮಕವಾದ ಶಿಕ್ಷಕರು ಮತ್ತು ಉಪನ್ಯಾಸಕರ ವಿಶೇಷ ಭತ್ಯೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೦೫ (೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೧–೦೮–೨೦೦೮ರ ನಂತರ ನೇಮಕಾತಿ ಹೊಂದಿದ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಇವರಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆಯೇ ;

(ಇ) ಇವರಿಗೆ ವಿಶೇಷ ಭತ್ಯೆಯನ್ನು ಹೆಚ್ಚುವರಿಯಾಗಿ ನೀಡಲಾದ ಪ್ರಕರಣಗಳಲ್ಲಿ ಭತ್ಯೆಯನ್ನು ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಈ) ಈ ಬಗ್ಗೆ ನ್ಯಾಯಾಲಯಗಳಲ್ಲಿ ಕೂಡಲೇ ವಸೂಲು ಮಾಡಲು ಸೂಚಿಸಿರುವ ಆದೇಶವನ್ನು ಹಿಂಪಡೆಯುಲು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನುದಾನಿತ ಶಾಲಾ ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ.

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ):–**

೧೦೬ (೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಅನುದಾನಿತ–ಶಾಲಾ ಕಾಲೇಜುಗಳಲ್ಲಿನ ಅನುದಾನ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚೆಗೆ ಆರ್ಥಿಕ ಇಲಾಖೆಯ ಎಲ್ಲಾ ಅನುದಾನಿತ ಹುದ್ದೆಗಳ ನೇಮಕಾತಿಯನ್ನು ತಡೆಹಿಡಿಯುವಂತೆ ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಆದೇಶವನ್ನು ವಾಪಸ್ಸು ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಒದಗಿಸಿ ಸೇವಾ ವಿಲೀನಗೊಳಿಸುವ ಬಗ್ಗೆ.

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) :–**

೧೦೭ (೪೨) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ;

(ಆ) ಇವರಿಗೆ ನೀಡುತ್ತಿರುವ ವೇತನ ಎಷ್ಟು ; ಎಷ್ಟು ತಿಂಗಳ ವೇತನ ಬಾಕಿ ಇದೆ ;

(ಇ) ಹೊಸದಾಗಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಅಧಿಸೂಚನೆ ಹೊರಡಿಸಲಾಗಿದೆಯೇ ;

(ಈ) ಇದರಿಂದ ಅತಿಥಿ ಉಪನ್ಯಾಸಕರು ಕೆಲಸವನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಉ) ನೆರೆ ರಾಜ್ಯ ಪಶ್ಚಿಮ ಬಂಗಾಳ ಹಾಗೂ ಇತರೆ ರಾಜ್ಯಗಳ ಮಾದರಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಉದ್ಯೋಗ ಭದ್ರತೆ ನೀಡಿ ಸೇವಾ ವಿಲೀನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮೀಣ ಸೇವೆಯನ್ನು ಮಾಡುವುದಾಗಿ ಮುಚ್ಚಳಿಕೆ ಬರೆದುಕೊಟ್ಟು ಅದನ್ನು ಉಲ್ಲಂಘಿಸುತ್ತಿರುವ ವೈದ್ಯರುಗಳ ವಿರುದ್ಧ ಕ್ರಮದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ. ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮ (೧೦೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಪ್ರವೇಶ ಪಡೆದು ಗ್ರಾಮೀಣ ಸೇವೆಯನ್ನು ಮಾಡುವುದಾಗಿ ಮುಚ್ಚಳಿಕೆ ಬರೆದುಕೊಟ್ಟು ಅದನ್ನು ಉಲ್ಲಂಘಿಸಲಾಗಿರುವ ೫೮೯ ವೈದ್ಯರುಗಳ ವಿರುದ್ಧ ದಿನಾಂಕ: ೨೦.೦೮.೨೦೧೭ ರಂದು ಕೆ.ಎಂ.ಸಿಗೆ ಪತ್ರ ಬರೆಯಲಾದ ಪ್ರಕರಣದಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿಯ ಬಗ್ಗೆ ವಿವರ ನೀಡುವುದು ;

(ಆ) ಷರತ್ತು ಉಲ್ಲಂಘಿಸಿ ಗ್ರಾಮೀಣ ಸೇವೆ ಮಾಡದ ವೈದ್ಯರುಗಳ ಮೇಲೆ ವಿಧಿಸುವ ದಂಡದ ಹಣವನ್ನು ರೂ.೧.೦೦ ಕೋಟಿ ರೂಪಾಯಿಗಳಿಗೆ ಏರಿಸಲು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಗ್ರಾಮೀಣ ಸೇವೆಯನ್ನು ಮಾಡದ ವೈದ್ಯರುಗಳ ಮೇಲೆ ಸರ್ಕಾರದ ತ್ವರಿತ ಮತ್ತು ಗಂಭೀರವಾದ ಕಠಿಣ ಕ್ರಮಗಳೇನು ? (ವಿವರ ನೀಡುವುದು)

## ಶಾಲಾ ಕಟ್ಟಡ ಕಾಮಗಾರಿಗಳಿಗೆ ಅನುದಾನ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೯ (೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಿಂದ ವಿವಿಧ ಯೋಜನೆಗಳಡಿಯಲ್ಲಿ ಪದವಿ ಪೂರ್ವ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಹಂಚಿಕೆ ಮಾಡಿರುವ ಅನುದಾನವೆಷ್ಟು ; ಅವು ಯಾವುವು ; (ವರ್ಷವಾರು ವಿವರ ಒದಗಿಸುವುದು)

(ಆ) ಹಂಚಿಕೆ ಮಾಡಿದ ಹಣದಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು ; (ಯೋಜನೆವಾರು, ವರ್ಷವಾರು ವಿವರ ಒದಗಿಸುವುದು)

(ಇ) ಇದರಲ್ಲಿ ಪೂರ್ಣಗೊಂಡ ಕಾಮಗಾರಿಗಳು ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು ; (ಯೋಜನೆವಾರು ಕಾಮಗಾರಿಗಳ ವಿವರ ನೀಡುವುದು)

(ಈ) ಪ್ರಸಕ್ತ ೨೦೧೯–೨೦೨೦ನೇ ಸಾಲಿನಲ್ಲಿ ವಿವಿಧ ಯೋಜನೆಯಡಿಯಲ್ಲಿ ಹಂಚಿಕೆ ಮಾಡಿರುವ ಹಾಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಉ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ ಪದವಿ ಪೂರ್ವ ಕಾಲೇಜು ಕಟ್ಟಡ ದುರಸ್ಥಿ ಮತ್ತು ಅಭಿವೃದ್ಧಿಗೆ ಬಿಡುಗಡೆ ಮಾಡಿದ

ಅನುದಾನ ಎಷ್ಟು ; ಅವು ಯಾವುವು ? (ವರ್ಷವಾರು ವಿವರ ನೀಡುವುದು)

## ಕಾಲೇಜು ಕಟ್ಟಡ ಕಾಮಗಾರಿಗಳಿಗೆ ಅನುದಾನ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೦ (೬೪) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳು ಹಾಗೂ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಿಂದ ಇದುವರೆವಿಗೂ ಈ ಕಾಲೇಜುಗಳ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಹಾಗೂ ಮೂಲಭೂತ ಸೌಕರ್ಯಗಳಿಗೆ ಮಂಜೂರಾದ ಹಣ ಎಷ್ಟು ; ಎಷ್ಟು ಹಣ ಖರ್ಚಾಗಿದೆ ; ಎಷ್ಟು ಕಾಮಗಾರಿ ಪೂರ್ಣಗೊಂಡಿವೆ ; ಇನ್ನೂ ಪೂರ್ಣಗೊಳ್ಳಬೇಕಾದ ಕಾಮಗಾರಿಗಳು ಯಾವುವು ;

(ಇ) ಕಲಬುರಗಿ ಕಾಲೇಜುಗಳಲ್ಲಿ ಅಗತ್ಯವಿರುವ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಇನ್ನೂ ಅಗತ್ಯವಿರುವ ಅನುದಾನ ಎಷ್ಟು ; ಯಾವ ಕಾಲಮಿತಿಯಲ್ಲಿ ಪೂರೈಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಕಾಡಾನೆ–ಮಾನವ ಸಂಘರ್ಷ ನಿರಂತರವಾಗಿ ಮುಂದುವರೆಯುತ್ತಿದ್ದು ಅದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೧ (೧೩೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆ ಮತ್ತು ಮಾನವ ಸಂಘರ್ಷ ನಿರಂತರವಾಗಿ ನಡೆಯುತ್ತಿದ್ದು, ಸದರಿ ಸಂಘರ್ಷಕ್ಕೆ ಸರ್ಕಾರ ಗುರುತಿಸಿರುವ ಪ್ರಮುಖ ಹಾಗೂ ವೈಜ್ಞಾನಿಕ ಕಾರಣಗಳೇನು ;

(ಆ) ಸದರಿ ಕಾರಣಗಳನ್ನು ಗುರುತಿಸಿದ ನಂತರದಲ್ಲಿ, ಸರ್ಕಾರ ಈ ಸಮಸ್ಯೆಯನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಕ್ರಮಗಳನ್ನು ಅನುಷ್ಠಾನಗೊಳಿಸಿದ ನಂತರ ಪ್ರಕರಣಗಳ ಸಂಖ್ಯೆ ಇಳಿಮುಖವಾಗಿದೆಯೇ ? (ಜಿಲ್ಲೆಗೆ ಸಂಬಂಧಿಸಿದ ಕಳೆದ ೫ ವರ್ಷಗಳ ಅಂಕಿ–ಅಂಶಗಳ ವಿವರವನ್ನು ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಅರಣ್ಯ ಇಲಾಖೆಗೆ ಒದಗಿಸಿರುವ ಅನುದಾನದ ಕುರಿತು.

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೨ (೧೩೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿಗೆ ಕೊಡಗು ಜಿಲ್ಲೆಗೆ ಒದಗಿಸಿರುವ ಒಟ್ಟು ಅನುದಾನವೆಷ್ಟು ;

(ಆ) ಸದರಿ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ವಿವರಗಳೇನು ; (ಪ್ರತಿ ಕಾಮಗಾರಿಯ ಅಂದಾಜು ಮೊತ್ತ ಪ್ರಗತಿಯ ಹಂತ, ವಿನಿಯೋಗಿಸಿರುವ ಮೊತ್ತ ಹಾಗೂ ಕಾಮಗಾರಿಯ ಉದ್ದೇಶಗಳ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಲ್ಲಿ ಭೂಕುಸಿತ ತಡೆಯಲು ನೆರವಾಗುವ ಕಾಮಗಾರಿಗಳನ್ನು ಆಧ್ಯತೆ ಮೇರೆಗೆ ತೆಗದುಕೊಳ್ಳಲಾಗಿದೆಯೇ ? (ಇದ್ದಲ್ಲಿ, ಸಂಪೂರ್ಣ ವಿವರ ನೀಡುವುದು)

## ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿನ ಮೂಲ ಸೌಲಭ್ಯಗಳ ಕೊರತೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೩ (೧೩೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆ ಪ್ರಾರಂಭವಾಗಿ ಎಷ್ಟು ವರ್ಷಗಳು ಸಂದಿವೆ ;

(ಆ) ಸದರಿ ಸಂಸ್ಥೆಯಲ್ಲಿ ಇಂದಿಗೂ ಮೂಲ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ಮೂಲ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಳಂಬವಾಗಿರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಸಿಯುವುದಿಲ್ಲವೇ ;

(ಈ) ಸದರಿ ಮೂಲ ಸೌಲಭ್ಯಗಳನ್ನು ಕೂಡಲೇ ಒದಗಿಸಿ ಸಂಸ್ಥೆಯು ಉನ್ನತ ಮಟ್ಟದ ವೈದ್ಯಕೀಯ ಶಿಕ್ಷಣ ನೀಡಲು ಅನುವಾಗುವಂತೆ ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ ?

## ಕೊಡಗು ಜಿಲ್ಲೆಯಲ್ಲಿ ರೋಗಿಗಳಿಗೆ ಡಯಾಲಿಸಿಸ್ ಸೇವೆ ಸರಿಯಾಗಿ ದೊರೆಯದಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪ (೧೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲಾಗಿದೆಯೇ ;

(ಆ) ಇದ್ದಲ್ಲಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವುವು ;

(ಇ) ಸದರಿ ಕೇಂದ್ರಗಳು ಪ್ರತಿದಿನ ಎಷ್ಟು ರೋಗಿಗಳಿಗೆ ಸೇವೆ ನೀಡುವ ಸಾಮರ್ಥ್ಯ ಹೊಂದಿವೆ ; ಹಾಗೂ ಸದರಿ ಕೇಂದ್ರಗಳಲ್ಲಿ ಕಳೆದ ಮೂರು ತಿಂಗಳಲ್ಲಿ ಸೇವೆ ಪಡೆದ ರೋಗಿಗಳ ಸಂಖ್ಯೆ ಎಷ್ಟು ; (ಪ್ರತಿದಿನದ ವಿವರ ನೀಡುವುದು)

(ಈ) ಸದರಿ ಕೇಂದ್ರಗಳಲ್ಲಿ ಇರಬೇಕಾದ ಮೂಲ ಸೌಕರ್ಯಗಳೇನು ಹಾಗೂ ಕರ್ತವ್ಯ ನಿರ್ವಹಿಸಬೇಕಾದ ವೈದ್ಯ ಹಾಗೂ ಇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಆ ಪ್ರಮಾಣದಲ್ಲಿ ವೈದ್ಯರನ್ನು ನಿಯೋಜಿಸಲಾಗಿದೆಯೇ ?

## ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಆಗಿರುವ ಜೀವಹಾನಿ ಕುರಿತು.

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫ (೧೩೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಜೀವಹಾನಿಯ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಮೃತರಾದ ವ್ಯಕ್ತಿಯ ಅವಲಂಬಿತರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರಗಳೇನು ;

(ಇ) ಸದರಿ ಫಲಾನುಭವಿಗಳಿಗೆ ಪರಿಹಾರ ನೀಡುವಲ್ಲಿ ಅನಾವಶ್ಯಕ ವಿಳಂಬ ಆಗಿದೆಯೇ ; ಆಗಿದ್ದಲ್ಲಿ, ಸದರಿ ವಿಳಂಬಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆ ಕೋವಿಡ್-೧೯ ನಿಂದ ಸಾವಿನ ಸಂಖ್ಯೆಯ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೬ (೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಕೋವಿಡ್-೧೯ ಸೋಂಕಿನಿಂದಾಗಿ ಸಾವನ್ನಪ್ಪಿರುವವರ ಸಂಖ್ಯೆ ಎಷ್ಟು ; ಕೋವಿಡ್-೧೯ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸೋಂಕಿತರಿಗೆ ಬದಗಿಸುತ್ತಿರುವ ಸೌಕರ್ಯಗಳು ಯಾವುವು ;

(ಇ) ಬೀದರ್ ಜಿಲ್ಲೆಯಲ್ಲಿ ಕೋವಿಡ್-೧೯ ಸಾಂಕ್ರಾಮಿಕ ರೋಗ ಪ್ರಾರಂಭವಾದ ದಿನದಿಂದ ಇಲ್ಲಿಯವರಿಗೆ ಪಿ.ಪಿ.ಇ ಕಿಟ್, ಸ್ಯಾನಿಟೈಸರ್, ಮಾಸ್ಕ್ ಮತ್ತು ವೆಂಟಿಲೇಟರ್‌ಗಳನ್ನು ಖರೀದಿಸಲು ಸರ್ಕಾರ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಆನ್‌ಲೈನ್ ತರಗತಿಗಳ ಬಗ್ಗೆ.

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭ (೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಲಾಕ್‌ಡೌನ್ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ತರಗತಿಯನ್ನು ನಡೆಸುತ್ತಿದ್ದು, ಈ ಭಾಗದ ಹಳ್ಳಿಗಳಲ್ಲಿ ಬಡ ವಿದ್ಯಾರ್ಥಿಗಳು ಈ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆನ್‌ಲೈನ್ ತರಗತಿಯಿಂದ ವಂಚಿತರಾದ ವಿದ್ಯಾರ್ಥಿಗಳಿಗೆ ಯಾವ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುವುದು ;

(ಆ) ಈ ಭಾಗದ ಕೆಲವು ಹಳ್ಳಿಗಳಲ್ಲಿ ಬಡ ವಿದ್ಯಾರ್ಥಿಗಳು ಆರ್ಥಿಕ ತೊಂದರೆಯಿಂದ ಮೊಬೈಲ್ ಖರೀದಿಸಲು ಸಾಧ್ಯವಾಗದಿರುವುದು ಹಾಗೂ ನೆಟ್‌ವರ್ಕ್ ಸಮಸ್ಯೆಯಿಂದ ಆನ್‌ಲೈನ್ ತರಗತಿಯಲ್ಲಿ ಭಾಗವಹಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವುಗಳನ್ನು ಪರಿಹರಿಸಿ, ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಕಾರ್ಮಿಕರಿಗೆ ಹಣ ಸಂದಾಯ ಮಾಡಿರುವ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮ (೬೯) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಮಹಾಮಾರಿ ಕರೋನಾದಿಂದ ಲಾಕ್‌ಡೌನ್ ಮಾಡಿದ ಪರಿಣಾಮವಾಗಿ ಸರ್ಕಾರ, ಆಟೋ ಚಾಲಕರ,

ಕಾರ್ಮಿಕರ ಖಾತೆಗಳಿಗೆ ಹಣ ಸಂದಾಯ ಮಾಡಲಾಗುವುದೆಂದು ಘೋಷಿಸಿದ್ದು, ಎಷ್ಟು ಕಾರ್ಮಿಕರು, ಈ ಸೌಲಭ್ಯವನ್ನು ಪಡೆದಿರುತ್ತಾರೆ ;

(ಆ) ಇದುವರೆಗೆ ಜಿಲ್ಲೆಯಲ್ಲಿ ಎಷ್ಟು ಕಾರ್ಮಿಕರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದೆ ; ಸ್ವೀಕರಿಸಿದ ಅರ್ಜಿಗಳಲ್ಲಿ ಎಷ್ಟು ಕಾರ್ಮಿಕರ ಖಾತೆಗಳಿಗೆ ಹಣ ಜಮಾ ಮಾಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಯಂತ್ರೋಪಕರಣಗಳ ಖರೀದಿ ಕುರಿತು.

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೧೧೯ (೦೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಯಂತ್ರೋಪಕರಣಗಳ ಖರೀದಿಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಅವ್ಯವಹಾರಕ್ಕೆ ಕಾರಣರಾದವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರಿನಿಂದ ತೆರಳಿದ ವಲಸೆ ಕಾರ್ಮಿಕರ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೧೨೦ (೦೪) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಲಾಕ್‌ಡೌನ್ ಜಾರಿಯಾದ ಸಂದರ್ಭದಲ್ಲಿ ಬೆಂಗಳೂರಿನಿಂದ ತಮ್ಮ ಸ್ವಂತ ಊರುಗಳಿಗೆ ಹಿಂದಿರುಗಿರುವ ವಲಸೆ ಕಾರ್ಮಿಕರ ಅಂದಾಜು ಸಂಖ್ಯೆ ಎಷ್ಟು ;

(ಆ) ಕಾರ್ಮಿಕರ ವಲಸೆಯಿಂದಾಗಿ ಬೆಂಗಳೂರು ನಗರದಲ್ಲಿ ಕಟ್ಟಡ ಕಾಮಗಾರಿಗಳು ಹಾಗೂ ಇತರೆ ಸರ್ಕಾರಿ ಕಾಮಗಾರಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಮುಂದಿರುವ ಪರಿಹಾರೋಪಾಯಗಳೇನು ?

## ಉತ್ತರ ಕರ್ನಾಟಕದಲ್ಲಿ ಸರ್ಕಾರಿ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದಿರುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್(ನಾಮ ನಿರ್ದೇಶನ ಹೊಂದಿದವರು):–**

೧೨೧ (೧೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐ.ಟಿ. ಬಿ.ಟಿ. ಹಾಗೂ ವಿಜ್ಞಾನ ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಸರ್ಕಾರಿ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಪದವಿ ಕಾಲೇಜುಗಳಿಗೆ ಮೂಲ ಸೌಕರ್ಯ ಹಾಗೂ ಕಟ್ಟಡಗಳಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಕಾಲೇಜುಗಳಿಗೆ ಮೂಲ ಸೌಕರ್ಯ ನೀಡದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊಸ ತಂತ್ರಜ್ಞಾನ ಅಳವಡಿಸಿ ಬೋಧನೆ ಮಾಡಲು ಯಾವ ಕ್ರಮ ಜರುಗಿಸಲಾಗಿದೆ ?

## ರಾಜ್ಯದಲ್ಲಿರುವ ಒಟ್ಟು ಆಸ್ಪತ್ರೆಗಳ ಕುರಿತು

**ಶ್ರೀ ಯು.ಬಿ. ವೆಂಕಟೇಶ್(ನಾಮ ನಿರ್ದೇಶನ ಹೊಂದಿದವರು):–**

೧೨೨ (೧೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಆಸ್ಪತ್ರೆಗಳಿವೆ ;

(ಆ) ಎಷ್ಟು ಆಸ್ಪತ್ರೆಗಳಲ್ಲಿ ಖಾಯಂ ವೈದ್ಯರಿದ್ದಾರೆ ;

(ಇ) ಎಷ್ಟು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆ ;

(ಈ) ಎಷ್ಟು ಆಸ್ಪತ್ರೆಗಳಲ್ಲಿ ದಾದಿಯರು ಕೊರತೆ ಇದೆ; ಇದ್ದಲ್ಲಿ, ಕೊರತೆ ಇರುವ ಸಿಬ್ಬಂದಿಯ ಸಂಖ್ಯೆ ಎಷ್ಟು ?

## ಶಿಶು ಪಾಲನಾ ಕೇಂದ್ರಗಳನ್ನು ತೆರೆಯುವ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್(ನಾಮ ನಿರ್ದೇಶನ ಹೊಂದಿದವರು):–**

೧೨೩ (೧೪೮) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಜ್ಯಾದ್ಯಂತ ಕಟ್ಟಡ ಕಾರ್ಮಿಕರ ಆರು

ವರ್ಷದೊಳಗಿನ ಮಕ್ಕಳ ಪಾಲನೆ ಮಡಲು ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಒಳಗೊಂಡಂತೆ ಎಷ್ಟು ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ;

(ಆ) ಸ್ಥಾಪಿಸಿದ್ದಲ್ಲಿ, ಇದುವರೆಗೂ ಎಷ್ಟು ಜನ ಫಲಾನುಭವಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ ;

(ಇ) ಈ ಯೋಜನೆಯನ್ನು ಇನ್ನು ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು ; ವಿಳಂಬಕ್ಕೆ ಕಾರಣಗಳೇನು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಶಿಕ್ಷಣ ಸಂಸ್ಥೆಗಳಿಗೆ ನೇಮಕಾತಿ ಬಗ್ಗೆ

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೨೪ (೨೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ವಿದ್ಯಾ ಸಂಸ್ಥೆಗಳಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆ ಮಂಜೂರು ಪ್ರಕ್ರಿಯೆಯು ತಡವಾಗಿರುವುದಕ್ಕೆ ಕಾರಣಗಳೇನು ;

(ಆ) ನೇಮಕಾತಿ ಪ್ರಕ್ರಿಯೆಯು ವಿಳಂಬದಿಂದಾಗಿ ಶಿಕ್ಷಕರ ವಯೋಮಿತಿ ಮೀರಿ ಅವಕಾಶ ವಂಚಿತರಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಲ್ಲದೆ ಅಂತಿಮ ವೇತನ ಪಡೆದುಕೊಳ್ಳಲು ತಡವಾಗುವುದಿಲ್ಲವೇ;

(ಇ) ಅನುದಾನಿತ ವಿದ್ಯಾಸಂಸ್ಥೆಗಳಲ್ಲಿ ಸರ್ಕಾರವು ನೇಮಕಾತಿ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಿದೆ ಮತ್ತು ಪೂರ್ಣಗೊಳಿಸಲಿದೆ ? (ವಿವರ ನೀಡುವುದು)

## ಗುಣಮಟ್ಟದ ಶಿಕ್ಷಣಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೨೫ (೨೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮೈಸೂರು ವಿಭಾಗದಲ್ಲಿ ಎಷ್ಟು ಪ್ರಾಥಮಿಕ ಪ್ರೌಢ ಪದವಿಪೂರ್ವ ಶಾಲಾ/ಕಾಲೇಜುಗಳಿಗೆ ಅನುದಾನ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಶಾಲಾ/ಕಾಲೇಜುಗಳು ಸ್ವಂತ ಕಟ್ಟಡವನ್ನು ಹೊಂದಿವೆ ;

(ಇ) ಈ ಕಾಲೇಜುಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳ ಅನುಪಾತವನ್ನು ನಿರ್ವಹಿಸಲಾಗಿದೆಯೇ ; ಶಿಕ್ಷಣ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆನ್‌ಲೈನ್ ಶಿಕ್ಷಣ ಸಮಸ್ಯೆಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೨೬ (೨೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆನ್‌ಲೈನ್ ಶಿಕ್ಷಣ ಪದ್ಧತಿಯಿಂದಾಗಿ ವಿದ್ಯಾರ್ಥಿಗಳು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಧ್ಯಮ ವರ್ಗದ ಜನ ಹಾಗೂ ಬಡವರಿಗೆ ಆನ್‌ಲೈನ್ ಕ್ಲಾಸ್‌ಗಳು ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಆನ್ ಲೈನ್ ಕ್ಲಾಸ್ ನಡೆಸಲು ಶಾಲೆಗಳು ಬೇಕಾಬಿಟ್ಟಿ ಡೊನೇಷನ್ ತೆಗೆದುಕೊಳ್ಳುತ್ತಿರುವುದರಿಂದ ಮಧ್ಯಮ ವರ್ಗದವರ ಜೀವನ ನಿರ್ವಹಣೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಇಂತಹ ಶಾಲೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೨೭ (೨೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪಿಸಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲೂಕುವಾರು ವಿವರ ನೀಡುವುದು)

(ಇ) ಡಯಾಲಿಸಿಸ್ ಕೇಂದ್ರವನ್ನು ಸರ್ಕಾರ ನೇರವಾಗಿ ಸ್ಥಾಪಿಸಿದೆಯೇ ಅಥವಾ ಖಾಸಗಿ ಸಹಭಾಗಿತ್ವಕ್ಕೆ ನೀಡಲು ಉದ್ದೇಶಿಸಿದೆಯೇ ;

(ಈ) ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳಿಗೆ ಹೆಚ್ಚಿನ ಯಂತ್ರೋಪಕರಣಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ ? (ವಿವರ ನೀಡುವುದು)

## ವೃತ್ತಿ ನಿರತ ಕಾರ್ಮಿಕರ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೨೮ (೨೧೫) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವ್ಯಕ್ತಿ ನಿರತ ಕಾರ್ಮಿಕರ ಮೇಲೆ ಶೋಷಣೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಇ) ಕಾರ್ಮಿಕರ ಶೋಷಣೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಈ) ವ್ಯಕ್ತಿ ನಿರತ ಸಂದರ್ಭದಲ್ಲಿ ಅಪಘಾತ ಮತ್ತು ಅವಘಡದಿಂದ ಮೃತಪಟ್ಟಿರುವವರ ಮಾಹಿತಿ ಸರ್ಕಾರದಲ್ಲಿದೆಯೇ ? (ವಿವರ ನೀಡುವುದು)

## ಕುಮಾರನಾಯಕ ವರದಿಯನ್ನು ಯಥಾವತ್ತಾಗಿ ಜಾರಿ ಮಾಡುವ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):–**

೧೨೯ (೨೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪಿ.ಯು. ಉಪನ್ಯಾಸಕರ ವೇತನ ತಾರತಮ್ಯವನ್ನು ಸರಿಪಡಿಸಲು ನೇಮಿಸಿದ ಕುಮಾರನಾಯಕ್ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸದಿರುವುದಕ್ಕೆ ಕಾರಣವೇನು ? (ವಿವರ ನೀಡುವುದು)

## ದ್ವಿತೀಯ ಪಿ.ಯು.ಸಿ. ಮೌಲ್ಯಮಾಪನ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):–**

೧೩೦ (೨೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳ ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ವಿಭಾಗಿಯ ಮಟ್ಟದಲ್ಲಿ ನಡೆಸಲು ಸಾಧ್ಯವಿಲ್ಲವೆ ?

## ಎಲ್.ಆರ್. ವೈದ್ಯನಾಥನ್ ವರದಿಯನ್ನು ಜಾರಿಗೆ ಮಾಡುವ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):–**

೧೩೧ (೨೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೈಹಿಕ ಶಿಕ್ಷಕರು ಹಲವಾರು ವರ್ಷದಿಂದ ಎಲ್.ಆರ್. ವೈದ್ಯನಾಥನ್ ವರದಿಯನ್ನು ಜಾರಿಗೆ ತರಬೇಕೆಂದು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವೃಂದ ಮತ್ತು ನೇಮಕಾತಿಗೆ ತಿದ್ದುಪಡಿ ತರಲು ಸರ್ಕಾರದ ನಿಲುವೇನು ?

## ಅನುದಾನಿತ ಶಾಲಾ ಕಾಲೇಜಿನ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ಮಂಜೂರು ಮಾಡುವ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):–**

೧೩೨ (೨೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಅನುದಾನಿತ ಶಾಲಾ ಕಾಲೇಜಿನ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ನೀಡಬೇಕೆಂದು ಬಸವರಾಜ ಹೊರಟ್ಟಿರವರ ವರದಿ ಜಾರಿಗೆ ತರಲು ಸರ್ಕಾರದ ಸ್ಪಷ್ಟ ನಿಲುವೇನು ?

## ಅತಿಥಿ ಉಪನ್ಯಾಸಕರಿಗೆ ಸಂಬಳವನ್ನು ಶೀಘ್ರದಲ್ಲಿ ಮಂಜೂರು ಮಾಡುವ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):–**

೧೩೩ (೨೮೧) ಮಾನ್ಯ ಉಪಮುಖ್ಯಮಂತ್ರಿಯವರು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಹಾಗೂ ತಂತ್ರಜ್ಞಾನ ಮತ್ತು ಉದ್ಯಮ ಶೀಲತೆ ಹಾಗೂ ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಸರ್ಕಾರಿ ಪದವಿ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ೬ ತಿಂಗಳಿಂದ ಸಂಬಳವನ್ನು ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸಂಬಳವನ್ನು ನೀಡಲಾಗುವುದು ?

## ಕೋವಿಡ್–೧೯ ನಿರ್ವಹಣೆಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ನಿರ್ವಹಣೆಗೆ ಕೋಲಾರ ಜಿಲ್ಲೆಗೆ ಮಾರ್ಚ್–೨೦೨೦ ರಿಂದ ಇದುವರೆವಿಗೂ ಬಿಡುಗಡೆಯಾಗಿರುವ ಮೊತ್ತವೆಷ್ಟು; ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಹಾಗೂ ದಾನಿಗಳು ನೀಡಿರುವ ಮೊತ್ತದ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಮೊತ್ತವನ್ನು ಎಲ್ಲಾ ವಿಧಾನ ಸಭಾ ಕ್ಷೇತ್ರಗಳಿಗೂ ಸಮಾನವಾಗಿ ಹಂಚಿಕೆ ಮಾಡಲಾಗಿದೆಯೇ ;

(ಇ) ಈ ಮೊತ್ತವನ್ನು ಖರ್ಚು ಮಾಡುವ ಅಧಿಕಾರವನ್ನು ಯಾವ ಯಾವ ಇಲಾಖೆಯ ಅಧಿಕಾರಿಗಳಿಗೆ ನೀಡಲಾಗಿದೆ ;

(ಈ) ಒಬ್ಬ ಕೋವಿಡ್–೧೯ ರೋಗಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಹಾಗೂ ದಾನಿಗಳು ನೀಡುವ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಹಾಗೂ ದಾನಿಗಳು ನೀಡಿರುವ ಒಟ್ಟು ಮೊತ್ತದಲ್ಲಿ ಇದುವರೆವಿಗೂ ವೆಚ್ಚವಾಗಿರುವ ಮೊತ್ತವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ವೈದ್ಯರು ಮತ್ತು ಇತರ ಸಿಬ್ಬಂದಿಗಳ ಕೊರತೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೫ (೧೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಗೆ (ಎಸ್.ಎನ್.ಆರ್. ಆಸ್ಪತ್ರೆ) ಮಂಜೂರಾಗಿರುವ, ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಸರ್ಕಾರಿ ಮತ್ತು ಅರೆಸರ್ಕಾರಿ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಸರ್ಕಾರಿ ಮತ್ತು ಅರೆ ಸರ್ಕಾರಿ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರ ನಿಗಧಿಪಡಿಸಿ ನೀಡುತ್ತಿರುವ ವೇತನದ ಮೊತ್ತವೆಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಇದುವರೆವಿಗೂ ತುಂಬದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗಾಗಿ ತುಂಬಲಾಗುವುದು? (ವಿವರಗಳನ್ನು ನೀಡುವುದು)

## ಶಿಕ್ಷಕರ ಬಡ್ತಿಯಲ್ಲಿ ಸರಿಯಾದ ಮಾಹಿತಿ ನೀಡದಿರುವುದು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೧೩೬ (೧೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಪ್ರೌಢ ಶಾಲಾ ವಿಭಾಗದಲ್ಲಿ ಸಧ್ಯಕ್ಕೆ ಶಿಕ್ಷಕರಿಗೆ ಬಡ್ತಿ ನೀಡುತ್ತಿದ್ದು ಇದಕ್ಕೆ ಇರುವ ಮಾನದಂಡವೇನು ; (ಸವಿಸ್ತಾರ ವರದಿ ನೀಡುವುದು)

(ಆ) ಜಿಲ್ಲೆಯ ಶಿರಸಿ ಶೈಕ್ಷಣಿಕ ವಿಭಾಗದಲ್ಲಿ ಬರುವ ತಾಲ್ಲೂಕಿನಲ್ಲಿ ಎಷ್ಟು ಶಿಕ್ಷಕರಿಗೆ ಬಡ್ತಿ ನೀಡಲಾಗಿದೆ ; ಬಡ್ತಿ ನೀಡುವಾಗ ಸರ್ಕಾರದ ನಿಯಮ ಉಲ್ಲಂಘನೆ ಮಾಡಿರುವುದು ನಿಜವೇ ; (ತಾಲ್ಲೂಕುವಾರು ಶಿಕ್ಷಕರ ಶಾಲಾವಾರು ಸರ್ಕಾರದ ನಿಯಮದಂತೆ ಸವಿಸ್ತಾರ ವರದಿ ನೀಡುವುದು)

(ಇ) ಸದರಿ ಶಿಕ್ಷಕರ ತಾಲ್ಲೂಕುವಾರು ಮಾಹಿತಿ ನೀಡುವಲ್ಲಿ ಶಿಕ್ಷಣ ಇಲಾಖೆ ಅವ್ಯವಹಾರಕ್ಕೆ ಆಸ್ಪದವಾಗುವಂತೆ ಕೆಲವೊಂದು ತಪ್ಪು ಮಾಹಿತಿ ನೀಡಿರುತ್ತಾರೆಂದು ತಿಳಿದು ಬಂದಿದ್ದು ; ಈ ಕುರಿತು ಸರ್ಕಾರ ಸೂಕ್ತ ತನಿಖೆ ಮಾಡುವುದೇ ? (ವಿವರ ನೀಡುವುದು)

## ಕೊರೋನಾ – ೧೯ ಅವಧಿಯಲ್ಲಿ ಸೀಲ್‌ಡೌನ್ ಮಾಡಿದಾಗ ನಡೆದ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೧೩೭ (೧೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಕೊರೋನಾ ಸೋಂಕಿತರ ವ್ಯಕ್ತಿಯ ಮನೆಯ ಸುತ್ತ ಕಳೆದ ೬ ತಿಂಗಳಿಂದ ಸೀಲ್‌ಡೌನ್ ಪದ್ಧತಿ ಜಾರಿಯಲ್ಲಿರುವಾಗ ಸದರಿ ವಿಷಯದಲ್ಲಿ ಬಹಳಷ್ಟು ಅವ್ಯವಹಾರ ಆಗಿರುವುದಾಗಿ ಸಾರ್ವಜನಿಕರಿಂದ ತಿಳಿದು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸೀಲ್ ಡೌನ್ ಮಾಡಬೇಕಾದಾಗ ಇರುವ ಮಾನದಂಡವೇನು; (ಸವಿಸ್ತಾರ ವರದಿ ನೀಡುವುದು)

(ಇ) ಜಿಲ್ಲೆಯಲ್ಲಿ ಕಳೆದ ೬ ತಿಂಗಳಿಂದ ಎಷ್ಟು ಸೋಂಕಿತ ವ್ಯಕ್ತಿಯ ಮನೆಯ ಸುತ್ತ ಸೀಲ್‌ಡೌನ್ ಮಾಡಿರುತ್ತಾರೆ ; ಇದಕ್ಕೆ ಯಾವ ಯಾವ ಸಾಮಗ್ರಿ ಬಳಸಿರುತ್ತಾರೆ ; ಎಷ್ಟು ದಿನ ಬಳಸಿರುತ್ತಾರೆ ; ಇದಕ್ಕೆ ತಗುಲಿರುವ ವೆಚ್ಚ ಮತ್ತು ಬಿಡುಗಡೆ ಮಾಡಿದ ಅಧಿಕಾರಿಗಳು ಯಾರು ? (ತಾಲ್ಲೂಕುವಾರು / ಜಿಲ್ಲಾವಾರು ಸವಿಸ್ತಾರ ಮಾಹಿತಿ ನೀಡುವುದು)

## ೧೯೯೫ರ ನಂತರ ಪ್ರಾರಂಭವಾದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೧೩೮ (೨೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೫ರ ನಂತರ ಪ್ರಾರಂಭವಾದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ವೇತನಾನುದಾನಕ್ಕೆ ಒಳಪಡಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ;

(ಇ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆಯೇ ;

(ಈ) ಇಲ್ಲವಾದಲ್ಲಿ, ಇದಕ್ಕೆ ಕಾರಣಗಳೇನು ?

## ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು (I.T.I) ವೇತನಾನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೧೩೯ (೨೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಬೇಕೆನ್ನುವ ಮನವಿಗಳು ಸ್ವೀಕೃತವಾಗಿವೆಯೇ ;

(ಆ) ಹಾಗಾದಲ್ಲಿ, ಸದರಿ ವೇತನಾನುದಾನಕ್ಕೆ ಒಳಪಡಿಸುವ ಕೆಲಸ ಯಾವ ಹಂತದಲ್ಲಿದೆ ;

(ಇ) ಯಾವ ವರ್ಷದ ನಂತರ ಪ್ರಾರಂಭಗೊಂಡ ಸಂಸ್ಥೆಗಳು ಅರ್ಹವಾಗಿವೆ ; ಮತ್ತು ಎಷ್ಟು ಖಾಸಗಿ ತರಬೇತಿ ಸಂಸ್ಥೆಗಳು ವೇತನಾನುದಾನಕ್ಕೆ ಅರ್ಹವಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವೇತನಾನುದಾನಕ್ಕೆ ಒಳಪಡಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತದೆ ?

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ನಿರುದ್ಯೋಗ ನಿವಾರಿಸುವುದಕ್ಕಾಗಿ ಇರುವ ಯೋಜನೆಗಳ ಕುರಿತು.

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೧೪೦ (೨೫೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ನಿರುದ್ಯೋಗ ನಿವಾರಿಸುವಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ಇರುವ ಯೋಜನೆಗಳಾವುವು ;

(ಆ) ಕಳೆದ ೦೩ ವರ್ಷಗಳಲ್ಲಿ ಬಾಗಲಕೋಟ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸದರಿ ಯೋಜನೆಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಗಲಕೋಟ ಜಿಲ್ಲೆಯ ಬೀಳಗಿ ವಿಧಾನಸಭಾ ವ್ಯಾಪ್ತಿಯಲ್ಲಿ ಎಷ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳಿವೆ ? (ಸರ್ಕಾರಿ ಮತ್ತು ಖಾಸಗಿ ಮಾಹಿತಿಯೊಂದಿಗೆ ಸಂಪೂರ್ಣ ವಿವರ ನೀಡುವುದು)

## SCVT ವತಿಯಿಂದ ನಡೆಯುತ್ತಿರುವ ITI ಕಾಲೇಜುಗಳ ಫಲಿತಾಂಶ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೧೪೧ (೨೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಸ್.ಸಿ.ವಿ.ಟಿ. (SCVT) ವತಿಯಿಂದ ನಡೆಯುತ್ತಿರುವ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ. ಕಾಲೇಜುಗಳ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಕಳೆದ ೦೨ ವರ್ಷಗಳಿಂದ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಫಲಿತಾಂಶ ವಿಳಂಬವಾಗಲು ಕಾರಣಗಳೇನು ; ಫಲಿತಾಂಶಗಳನ್ನು ಆದಷ್ಟು ಬೇಗನೆ ಪ್ರಕಟಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಫಲಿತಾಂಶ ವಿಳಂಬವಾಗಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಳಗಾವಿ ವಿಭಾಗದಲ್ಲಿನ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೧೪೨ (೨೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗದಲ್ಲಿನ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಸ್ಥೆಗಳ ಹೆಸರಿನೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಹುದ್ದೆಗಳು ಯಾವ ವರ್ಷಗಳಿಂದ ಖಾಲಿ ಇವೆ ;

(ಇ) ಸದರಿ ಹುದ್ದೆಗಳು ನೇಮಕಾತಿ ಮಾಡಿಕೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ?

## ವನ್ಯ ಜೀವಿಗಳ ಕಳ್ಳ ಬೇಟೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೩ (೧೧೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜನವರಿ – ೨೦೨೦ರಿಂದ ಮೈಸೂರು–ಚಾಮರಾಜನಗರ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ, ವನ್ಯ ಜೀವಿ ದಾಳಿಯಿಂದ ಮೃತಪಟ್ಟ ಹಾಗೂ ಗಾಯಗೊಂಡವರ ಸಂಖ್ಯೆ ಎಷ್ಟು ; ರೈತಾಪಿ ಜನರಿಗೆ ಸೇರಿದ ಎಷ್ಟು ಜಾನುವಾರುಗಳು (ಹಸು, ಎತ್ತು, ಎಮ್ಮೆ, ಆಡು, ಕುರಿ) ಮೃತಪಟ್ಟಿರುತ್ತವೆ ; ಇವರಿಗೆ ಪರಿಹಾರದ ಹಣ ವಿತರಣೆ ಮಾಡಲಾಗಿದೆಯೇ ; (ವಿವರ ಒದಗಿಸುವುದು)

(ಆ) ಸದರಿ ಅವಧಿಯಲ್ಲಿ ಈ ಅರಣ್ಯದಲ್ಲಿ ನಡೆದಿರುವ ಕಳ್ಳಬೇಟೆ ಪ್ರಕರಣಗಳು ವರದಿಯಾಗಿದೆಯೇ ; ಎಷ್ಟು ವನ್ಯಜೀವಿಗಳು ಮೃತಪಟ್ಟಿವೆ ; ಕಳ್ಳಬೇಟೆಗಾರರನ್ನು ಬಂಧಿಸಲಾಗಿದೆಯೇ ; ಈ ಕಳ್ಳಬೇಟೆ ಪ್ರಕರಣಗಳ ಹಿಂದಿರುವ ಜಾಲವನ್ನು ಬೇಧಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಮೈಸೂರಿನ ನಜರ್ ಬಾದ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ದುಸ್ಥಿತಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೪ (೧೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದ ನಜರ್ ಬಾದ್‌ನ ಮಸೀದಿ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಶಾಲೆಯ ಕಂಪೌಂಡ್ ನಿರ್ಮಾಣ ಮಾಡಲು ಹಾಗೂ ಕುಸಿದುಬಿದ್ದಿರುವ ಹಳೆಯ ಶಾಲಾ ಕಟ್ಟಡವನ್ನು ಸ್ವಚ್ಛಗೊಳಿಸಿ ವಿದ್ಯಾರ್ಥಿಗಳಿಗೆ ಆಟದ ಮೈದಾನ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೆಯೇ ;

(ಇ) ಶಾಲೆಯ ಸುತ್ತಲೂ ಸಾರ್ವಜನಿಕರು ಮಲಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಅನಾರೋಗ್ಯಕರ ಕಲುಷಿತ ವಾತಾವರಣ ನಿರ್ಮಾಣವಾಗಿದ್ದು, ಇದನ್ನು ಸ್ವಚ್ಛಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ಪ್ರಸ್ತುತ ಈ ಶಾಲೆಯಲ್ಲಿ ೧ ರಿಂದ ೭ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಇದನ್ನು ಒಂದು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿಗೊಳಿಸಿ, ಹೆಚ್ಚು ಸಂಖ್ಯೆಯ ವಿದ್ಯಾರ್ಥಿಗಳು ಈ ಶಾಲೆಗೆ ಸೇರ್ಪಡೆಯಾಗಿ ವಿದ್ಯಾಭ್ಯಾಸ ಮಾಡುವಂತೆ ಕ್ರಮ ಜರುಗಿಸಲಾಗುವುದೇ ?

## ನಂಜನಗೂಡು ಬಳಿ ಇರುವ ಅಂಡ್ ರೀಡ್ ಟೇಲರ್ ಕಾರ್ಖಾನೆ ಮುಚ್ಚಿರುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೫ (೧೧೬) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ಬಳಿ ಇರುವ ರೀಡ್ ಅಂಡ್ ಟೇಲರ್ ಕಾರ್ಖಾನೆ ಮುಚ್ಚಿದ್ದು, ಕಾರ್ಮಿಕರು ಬೀದಿಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಜನ ಕಾರ್ಮಿಕರು ಕೆಲಸ ಕಳೆದುಕೊಂಡಿದ್ದಾರೆ ;

(ಆ) ಈ ಬಗ್ಗೆ ಕಾರ್ಮಿಕ ಸಚಿವರು, ಜಿಲ್ಲಾ ಸಚಿವರು, ಜಿಲ್ಲಾಧಿಕಾರಿಯವರು, ಕಾರ್ಖಾನೆಯ ಲಿಕ್ವಿಡೇಟರ್ ಜೊತೆ

ಮಾತುಕತೆ ನಡೆಸಿದ್ದಾರೆಯೇ ; ಇದರ ಫಲಶ್ರುತಿಗಳೇನು ; ಕಾರ್ಮಿಕರಿಗೆ ಸೂಕ್ತ ನ್ಯಾಯ ದೊರಕಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಸದರಿ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸುವುದು ಯಾವಾಗ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 042/450 ಪ್ರತಿಗಳು/15–09–2020